ಸಂಪುಟ 01 | ಸಂಚಿಕೆ 04 | ಬುಧವಾರ 19 ನವೆಂಬರ್ 2025 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಅಂತರರಾಷ್ಟ್ರೀಯ ಪುರುಷರ ದಿನ (International Men's Day) ವಿಶೇಷತೆ: ಪುರುಷರು ಮತ್ತು ಬಾಲಕರ ಸಕಾರಾತ್ಮಕ ಮೌಲ್ಯಗಳು ಹಾಗೂ ಸಮಾಜಕ್ಕೆ ಅವರ ಕೊಡುಗೆಗಳನ್ನು ಗುರುತಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಜೊತೆಗೆ, ಪುರುಷರ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವುದು, ಲಿಂಗ ಸಂಬಂಧಗಳನ್ನು ಸುಧಾರಿಸುವುದು ಮತ್ತು ಲಿಂಗ ಸಮಾನತೆಯನ್ನು ಉತ್ತೇಜಿಸುವುದು ಇದರ ಪ್ರಮುಖ ಉದ್ದೇಶ.

2) ಇಂದಿರಾ ಗಾಂಧಿ ಜನ್ಮದಿನ (Indira Gandhi's Birthday) ವಿಶೇಷತೆ: ಭಾರತದ ಮೊದಲ ಮತ್ತು ಏಕೈಕ ಮಹಿಳಾ ಪ್ರಧಾನಮಂತ್ರಿ ಇಂದಿರಾ ಗಾಂಧಿಯವರ ಜನ್ಮದಿನವನ್ನು ಈ ದಿನದಂದು ಆಚರಿಸಲಾಗುತ್ತದೆ.

3) ಮಹಿಳಾ ಉದ್ಯಮಶೀಲತಾ ದಿನ (Women's Entrepreneurship Day) ವಿಶೇಷತೆ: ಮಹಿಳಾ ಉದ್ಯಮಿಗಳ ಪ್ರಯತ್ನಗಳನ್ನು ಗುರುತಿಸಲು, ಬೆಂಬಲಿಸಲು ಮತ್ತು ಜಾಗತಿಕ ಆರ್ಥಿಕತೆಗೆ ಅವರ ಕೊಡುಗೆಗಳನ್ನು ಗೌರವಿಸಲು ಈ ದಿನವನ್ನು ಮೀಸಲಿಡಲಾಗಿದೆ .

## ಸುಭಾಷಿತ

'ಜ್ಞಾನ ಮತ್ತು ನಡತೆ
ಇವೆರಡೂ ಹೃದಯದ
ಎರಡು ರೆಕ್ಕೆಗಳು.'

ಗೌತಮ ಬುದ್ಧ

# ಪ್ರಧಾನಿ ಮೋದಿ ಭೇಟಿಯಾದ ಸಿಎಂ ಸಿದ್ದರಾಮಯ್ಯ; ರಾಯಚೂರಿಗೆ ಏಮ್ಸ್ ಬೇಕು ಎಂಬ ಮನವಿ

❑ ನೈಜ್ಯ ದೇಸೆ ನ್ಯೂಸ್

ದೆಹಲಿ: ದೆಹಲಿ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ರಾಜ್ಯಕ್ಕೆ ಸಂಬಂಧಿಸಿದಂತೆ ಬಹುದಿನಗಳಿಂದ ಬಾಕಿಯಿರುವ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದ್ದಾರೆ.

ಇಂದು ಸಂಜೆ ಪ್ರಧಾನಿ ಮೋದಿ ಭೇಟಿ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ, ಕಬ್ಬು ಬೆಲೆ ನಿಗದಿ, 2,100 ಕೋಟಿ ರೂ.ಗಳಿಗೂ ಹೆಚ್ಚು ಪ್ರವಾಹ ಪರಿಹಾರ ಬಿಡುಗಡೆ ಮತ್ತು ನಿರ್ಣಾಯಕ ನೀರಾವರಿ ಯೋಜನೆಗಳಿಗೆ ಅನುಮೋದನೆ ನೀಡುವಂತೆ ಮನವಿ ಸಲ್ಲಿಸಿರುವುದಾಗಿ ತಿಳಿಸಿದರು.

ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ: ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗೆ ಅನುಮೋದನೆ ನೀಡುವಂತೆ ಪ್ರಧಾನಿ ಮೋದಿ ಅವರಿಗೆ ಮನವಿ ಸಲ್ಲಿಸಿದ್ದೇನೆ.

ರಾಯಚೂರು ಜಿಲ್ಲೆಯು ಆರೋಗ್ಯ ರಕ್ಷಣೆ, ಶಿಕ್ಷಣ ಹಾಗೂ ತಲಾ ಆದಾಯದ ಮಟ್ಟದಲ್ಲಿ ಆರಂಭಿಕ ಹಂತದಲ್ಲಿದೆ. ದಲಿತರು ಹಾಗೂ ಹಿಂದುಳಿದ ವರ್ಗಗಳು ಹೆಚ್ಚಿನ ಸಂಖ್ಯೆಯಲ್ಲಿರುವ ಜಿಲ್ಲೆಯ ಜನರಿಗೆ ಗುಣಮಟ್ಟದ ರೆಫರೆಲ್ ವೈದ್ಯಕೀಯ



ಕೇಂದ್ರದ ಅಗತ್ಯತೆಯನ್ನು ಪೂರೈಸಲು ರಾಯಚೂರು ಜಿಲ್ಲೆಯಲ್ಲಿ ಏಮ್ಸ್ ಸ್ಥಾಪನೆಗೆ ಅನುಮೋದನೆಯನ್ನು ನೀಡುವಂತೆ ಮನವಿಪತ್ರದಲ್ಲಿ ಕೋರಲಾಗಿದೆ ಎಂದರು. ಕರ್ನಾಟಕ ಸರ್ಕಾರವು ರಾಯಚೂರಿನಲ್ಲಿ ಂಖಐಒಖ ಸ್ಥಾಪನೆಗೆ ಅನುಮೋದನೆ ಕೋರಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯಕ್ಕೆ ವಿವರವಾದ ಯೋಜನಾ ವರದಿಯನ್ನು ಈಗಾಗಲೇ ಸಲ್ಲಿಸಿದೆ.

ಯೋಜನೆಗೆ ಅವಶ್ಯವಾದ ಭೂಮಿಯ ಲಭ್ಯತೆ, ಸಂಪರ್ಕ ವ್ಯವಸ್ಥೆ ಮತ್ತು ಸ್ಥಳೀಯ ಆಡಳಿತದ ಬೆಂಬಲ ಸೇರಿದಂತೆ AIIMS ನಂತಹ ರಾಷ್ಟ್ರೀಯ ಮಟ್ಟದ ಸಂಸ್ಥೆಯನ್ನು ಜಿಲ್ಲೆಯಲ್ಲಿ ಸ್ಥಾಪಿಸಲು ಪೂರಕ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮನವಿ ಪತ್ರದಲ್ಲಿ ಕೋರಲಾಗಿದೆ.

ಪ್ರವಾಹ ಪರಿಹಾರಕ್ಕೆ ಮನವಿ : ರಾಜ್ಯದಲ್ಲಿ ಒಟ್ಟು 14,58,000 ಹೆಕ್ಟೇರ್ ಬೆಳೆ ಹಾನಿಯಾಗಿದ್ದು, ಆ ಕುರಿತು ನಾವು ಜಂಟಿ ಸಮೀಕ್ಷೆ ಮಾಡಿಸಿದ್ದೇವೆ. ರಾಜ್ಯದಲ್ಲಿ ಒಟ್ಟು 3,560 ಕೋಟಿ ನಷ್ಟವಾಗಿದ್ದು, ಮಳೆಯಿಂದಾಗಿ ಮೂಲಸೌಕರ್ಯಗಳಿಗೂ ಹಾನಿಯಾಗಿರುವ ಬಗ್ಗೆ ಪ್ರಧಾನಮಂತ್ರಿಯವರಿಗೆ ಮನವರಿಕೆ ಮಾಡಿದ್ದೇವೆ. ಇದಲ್ಲದೇ ಸಾವಿರಾರ ಮನೆಗಳು, ರಸ್ತೆ ಹಾಗೂ ಶಾಲೆ ಗಳು ಹಾನಿಗೀಡಾಗಿದ್ದು ಎನ್.ಡಿ.ಆರ್ ಎಫ್ ವತಿಯಿಂದ ಪರಿಹಾರವನ್ನು ಕೋರಿ ಎರಡು ಮನವಿ ಪತ್ರಗಳನ್ನು ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರ 2,136 ಕೋಟಿ ರೂ.ಗಳ ಪರಿಹಾರ ಬಿಡುಗಡೆ ಮಾಡಬೇಕು ಎಂದು ಸಿಎಂ ಆಗ್ರಹಿಸಿದರು.


ಪ್ರಮುಖ ನೀರಾವರಿ ಯೋಜನೆಗಳು ರಾಜ್ಯದ ಪ್ರಮುಖ ನೀರಾವರಿ ಹಾಗೂ ಕುಡಿಯುವ ನೀರಿನ ಯೋಜನೆಗಳಿಗೆ ಕೇಂದ್ರದಿಂದ ಬಾಕಿ ಇರುವ ತೀರುವಳಿಗಳನ್ನು ದೊರಕಿಸಲು ಪ್ರಧಾನಮಂತ್ರಿಗಳು ಮಧ್ಯಪ್ರವೇಶ ಮಾಡಬೇಕು. ಪ್ರಧಾನಮಂತ್ರಿಗಳಿಗೆ ಸಲ್ಲಿಸಿರುವ ಮನವಿ ಪತ್ರದಲ್ಲಿ ಸಮತೋಲನ ಅಣೆಕಟ್ಟು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ತೀರುವಳಿಗಳನ್ನು ನೀಡುವಂತೆ ಕೇಂದ್ರ ಜಲ ಆಯೋಗಕ್ಕೆ ನಿರ್ದೇಶಿಸಬೇಕು ಎಂದರು.

ಕಬ್ಬು ಬೆಳೆಗೆ ದರ ನಿಗದಿ: ಕಬ್ಬು ಬೆಳೆಗಾರರ ಸಮಸ್ಯೆ ಬಗ್ಗೆಯೂ ಪ್ರಧಾನಿ ಮೋದಿಯವರಿಗೆ ಮಾಹಿತಿ ನೀಡಲಾಗಿದೆ. ಎಫ್‌ಆರ್‌ಪಿ ನಿಗದಿ ಮಾಡುವುದು ಕೇಂದ್ರ ಸರ್ಕಾರ. ಟನ್ಗೆ 3,500 ರೂ. ಕೊಡಬೇಕು ಎಂದು ರೈತರ ಬೇಡಿಕೆ ಇದ್ದು, ರಾಜ್ಯದಲ್ಲಿ 81 ಸಕ್ಕರೆ ಕಾರ್ಖಾನೆಗಳಿವೆ. ರೈತ ಮುಖಂಡರು, ಕಾರ್ಖಾನೆ ಮಾಲೀಕರ ಜೊತೆ ಸಭೆ ನಡೆಸಿ ಪ್ರತಿ ಟನ್ ಕಬ್ಬಿಗೆ 3,300 ರೂ. ನಿಗದಿ ಮಾಡಿದ್ದೆವು.

## ರೈತರಿಗೆ ಎರಡನೇ ಬೆಳೆಗೆ ನೀರಿಗಾಗಿ ನಿಖಿಲ್ ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಹೋರಾಟ-ವೆಂಕಟರಾವ್ ನಾಡಗೌಡ

❑ ನೈಜ್ಯ ದೇಸೆ ನ್ಯೂಸ್

ಸಿಂಧನೂರು: ಜೆಡಿಎಸ್ ಪಕ್ಷದ ರಾಜ್ಯ ಯುವ ನಾಯಕರಾದ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ, ಸಿಂಧನೂರು ನಗರದಲ್ಲಿ ರೈತರಿಗೆ ಎರಡನೇ ಬೆಳೆಗೆ ನೀರು ಕೊಡುವ ಕುರಿತು ,ಹಾಗೂ ಖರೀದಿ ಕೇಂದ್ರ ಪ್ರಾರಂಭ ಮಾಡಿದೆ ಇರುವುದು ಹಾಗೂ ಬೆಳೆ ಹಾನಿಯಾದ ರೈತರಿಗೆ ಪರಿಹಾರ ಸಲುವಾಗಿ ಜೆಡಿಎಸ್ ಪಕ್ಷದ ವತಿಯಿಂದ ಬೃಹತ್ ಹೋರಾಟವನ್ನು ಹಮ್ಮಿಕೊಳ್ಳಲಾಗಿದೆ.



ಈ ಹೋರಾಟದಲ್ಲಿ ರೈತರು ಹಾಗೂ ಪಕ್ಷದ ಎಲ್ಲಾ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮಾಜಿ ಸಚಿವರು, ಕೆ ಓ ಎಫ್ ರಾಜ್ಯಾಧ್ಯಕ್ಷರಾದ ವೆಂಕಟರಾವ್ ನಾಡಗೌಡರು ಪತ್ರಿಕೆಗೆ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ, ಬಸವರಾಜ್ ನಾಡಗೌಡ್ರವರು ಜೆಡಿಎಸ್ ತಾಲೂಕು ಅಧ್ಯಕ್ಷರು, ಸಿಂಧನೂರು ಸೇರಿದಂತೆ ಇತರೆ ಪ್ರಮುಖ ಮುಖಂಡರು ಇದ್ದರೂ.

# ರಾಯಚೂರು ಇಂದ ಸಿಂಧನೂರು ಮಾರ್ಗದಲ್ಲಿ KSRTC ಬಸ್ ಅಪಘಾತ




❑ ನೈಜ್ಯ ದೇಸೆ ನ್ಯೂಸ್

ರಾಯಚೂರು: ಸಿಂಧನೂರು ಮಾರ್ಗದಲ್ಲಿ ಸಂಚರಿಸುತ್ತಿದ್ದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ (KSRTC) ಬಸ್ ಸಂಖ್ಯೆ ಏಂ 36 ಈ 1548 ಜವಳಗೇರಾ?ಸಿಂಧನೂರು ರಸ್ತೆಯಲ್ಲಿರುವ



ರೈಸ್ ಮಿಲ್ ಹತ್ತಿರ ಅಪಘಾತಕ್ಕೊಳಗಾಗಿದೆ.

ಅಪಘಾತದ ವೇಳೆ ಬಸ್ ಚಾಲಕನಿಗೆ ಗಾಯಗಳಾಗಿದ್ದು, ಅವರನ್ನು ತಕ್ಷಣವೇ ಸಾರ್ವಜನಿಕ ಆಸ್ಪತ್ರೆ ಸಿಂಧನೂರು ಗೆ ದಾಖಲಿಸಲಾಗಿದೆ. ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಕೆಲವು ಪ್ರಯಾಣಿಕರು ಸಹ ಸಣ್ಣ?ಮಧ್ಯಮ ಮಟ್ಟದ ಗಾಯಗಳಿಗೆ ಒಳಗಾಗಿದ್ದು, ಅವರಿಗೆ ಸ್ಥಳೀಯ ನಾಗರಿಕರು ಮತ್ತು ಸಿಬ್ಬಂದಿಯ ನೆರವಿನಿಂದ 108 ಆಂಬುಲೆನ್ಸ್ ಮೂಲಕ ಸಿಂಧನೂರು ಸಾರ್ವಜನಿಕ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಅಪಘಾತ ಸಂಭವಿಸಿದ ನಂತರ ಸ್ಥಳಕ್ಕೆ ಪೊಲೀಸರು, 108 ಆಂಬುಲೆನ್ಸ್ ಸಿಬ್ಬಂದಿ ಹಾಗೂ ಸಾರ್ವಜನಿಕರು ಧಾವಿಸಿ ರಕ್ಷಣೆ ಕಾರ್ಯಾಚರಣೆ ನಡೆಸಿದರು.

ಗಾಯಾಳುಗಳಿಗೆ ಅಗತ್ಯವಾದ ತುರ್ತು ಚಿಕಿತ್ಸೆ ನೀಡಲಾಗುತ್ತಿದೆ. ಅಪಘಾತದ ನಿಖರ ಕಾರಣ ಪತ್ತೆಹಚ್ಚುವ ಕಾರ್ಯವನ್ನು ಪೊಲೀಸರು ಕೈಗೊಂಡಿದ್ದಾರೆ. KSRTC ಅಧಿಕಾರಿಗಳು ಘಟನೆಯ ಕುರಿತು ವರದಿ ಪಡೆಯುತ್ತಿದ್ದು, ಮುಂದಿನ ಕ್ರಮಗಳನ್ನು ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

# ಸಿರವಾರ-ಘರ್ಜಿಸಿದ ಜೆ.ಸಿ.ಬಿ :ಅತಿಕ್ರಮಣ ಫುಟ್ ಪಾತ್ ತೆರುವಿಗೆ ಮುಂದಾದ ತಾಲೂಕ ಆಡಳಿತ

❑ ನೈಜ್ಯ ದೇಸೆ ನ್ಯೂಸ್

ಸಿರವಾರ: ಇತ್ತೀಚಗೆ ಪಂಚಾಯತನ ಅಧಿಕಾರಿಗಳು ಹಾಗೂ ತಾಲೂಕು ಆಡಳಿತ ವತಿಯಿಂದ ನೂರಾರು ಜನ ಪೊಲೀಸರ ಸರ್ಪಗಾವಲಿನಲ್ಲಿ ಪಟ್ಟಣದಲ್ಲಿನ ಅತಿಕ್ರಮಿತ ಫುಟ್ ಪಾತ್ ತೆರವು ಕಾರ್ಯಾಚರಣೆಗೆ ಪ್ರಾರಂಭಿಸಿ ಮುಗಿಸಿದ್ದು ಮಾನ್ವಿ ವೃತ್ತದಿಂದ ಬಸವ ವೃತ್ತ ದವರೆಗಿನ ವ್ಯಾಪಾರಿಗಳು ತಮ್ಮ ಅಂಗಡಿ ಮುಂಗಟ್ಟುಗಳನ್ನು ಫುಟ್ ಪಾತ್ ತನಕ ಅತಿಕ್ರಮಿಸಿದ್ದಾರೆ ಎಂದು ಹಲವು ಪ್ರಗತಿಪರ ಸಂಘಟನೆಗಳು ತೆರವುಗೊಳಿಸಲು ಮನವಿ ಮಾಡಿದ್ದರು.

ಇದರನ್ವಯ ಕಳೆದ ಫೆಬ್ರವರಿ ತಿಂಗಳಿನಿಂದ ತೆರವುಗೊಳಿಸಲೇ ಬೇಕು ಎಂಬ ಪಟ್ಟಣ ಪಂಚಾಯತತಯು



ಆದೇಶವನ್ನುವ ನೀಡುತ್ತಾ ಬಂದಿದ್ದರು ಜನರು ಕ್ಯಾರೆಯನ್ನದೆ ಕುಳಿತಿದ್ದರು ಆದ್ದರಿಂದ ಇತ್ತೀಚಗೆ ತಾಲೂಕ ಆಡಳಿತ ತೆರವು ಕಾರ್ಯ ಪ್ರಾರಂಭಿಸಿ,ಬೆಳಿಗ್ಗೆಯಿಂದಲೇ ಕಾರ್ಯಾಚರಣೆಗಿಳಿದ ಜೆ.ಸಿ.ಬಿ. ಗಳು ಫುಟ್ ಪಾತ್ ಗೆ ಹೊಂದಿಕೊಂಡ ಟಿನ್ ಶೆಡ್ ಗಳು , ಕಬ್ಬಿಣದ ಕಂಬಗಳು, ಗೋಡೆಗಳನ್ನು ತೆರವುಗೊಳಿಸಿದ್ದಾರೆ.ಸಾರ್ವಜನಿಕರಿಂದ ವಾದ-ವಿವಾದಗಳು ಬಂದರು ಸರಿಪಡಿಸುತ್ತ ತೆರವು ಕಾರ್ಯಾಚರಣೆ ಮಾಡಿದರು. ಇದ-ರಿಂದ ಸಣ್ಣ ಸಣ್ಣ ಫುಟ್ ಪಾತ್ ವ್ಯಾಪಾರಿಗಳಿಗೆ ತೊಂದರೆ ಯಾಗಿದೆ. ಆದರೆ ಬಸ್ಟ್ಯಾಂಡ್ ಸುತ್ತ ಮುತ್ತ ಮುಂದೆ. ವಾಹನಗಳು ನಿಲ್ಲಲು ಅನುಕೂಲವಾಗಿದೆ, ಹಾಗೂ ಮರೆಯಾಗಿದ್ದ ಇಂದಿರಾ ಕ್ಯಾಂಟಿನ್ ಈಗ ಸಾರ್ವಜನಿಕರಿಗೆ ಕಾಣುವಂತಾಗಿದೆ.ಆದರು ಯಾವುದ ಪ್ರಯೋಜನವಾಗಿಲ್ಲ ಯಾಕಂದ್ರೆ ಅಲ್ಲಿ ಆಡಳಿತವರ್ಗ ರುಚಿಕರವಾದ ಅಡಿಗೆ ಮಾಡುತ್ತಿಲ್ಲ,ಎನ್ನುತ್ತಿದ್ದಾರೆ ಜನರು.ಇನ್ನು ಮುಂದೆಯಾದರು ಇಂದಿರಾ ಕ್ಯಾಂಟಿನಗೆ ಸಂಭಂದ ಪಟ್ಟ ಅಧಿಕಾರಿಗಳು ಜಾಗ್ರತರಾಗಿ ರುಚಿಕರವಾದ ಆಹಾರ ನೀಡುವರೋ ಎಂದು ಕಾದು ನೋಡಬೇಕಾಗಿದೆ.

## ಚಿಕ್ಕಬಳ್ಳಾಪುರ ಇಂಗುಕೆರೆ ಮತ್ತು ಕೋಡಿ ಕಾಲುವೆ ನಿರ್ಮಾಣ ಕಾಮಗಾರಿಗೆ ಸಚಿವ ಎನ್‌ಎಸ್ ಬೋಸರಾಜ್ ರವರಿಂದ ಭೂಮಿ ಪೂಜೆ

❑ ನೈಜ್ಯ ದೇಸೆ ನ್ಯೂಸ್

ಚಿಕ್ಕಬಳ್ಳಾಪುರ: ಜಿಲ್ಲೆಯ ಮುದ್ದೇಹಳ್ಳಿಯ ಸತ್ಯಸಾಯಿಗ್ರಾಮದ ಬಳಿ ಇಂಗುಕೆರೆ ಮತ್ತು ಕೋಡಿ ಕಾಲುವೆ ನಿರ್ಮಾಣ ಕಾಮಗಾರಿಗೆ ಸತ್ಯಸಾಯಿ ಟ್ರಸ್ಟ್ ನ ಸದ್ಗುರು ಶ್ರೀ ಮಧುಸೂದನ್ ಸಾಯಿ ಜೀ ಸಮಕ್ಷಮದಲ್ಲಿ, ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎಂ.ಸಿ. ಸುಧಾಕರ್ ಅವರೊಂದಿಗೆ ಇಂದು ಭೂಮಿ ಪೂಜೆ ನೆರವೇರಿಸಿದ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಪರಿಷತ್ತಿನ ಸಭಾ ನಾಯಕರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎನ್ ಎಸ್ ಬೋಸರಾಜು ಜೀ ಅವರು.

ಸದ್ಗುರು ಶ್ರೀ ಮಧುಸೂದನ್ ಸಾಯಿ ನೇತೃತ್ವದಲ್ಲಿ ನಡೆಯುತ್ತಿರುವ ಜಲ



ಸಂರಕ್ಷಣಾ ಚಟುವಟಿಕೆಗಳು ಶ್ಲಾಘನೀಯ ಹಾಗೂ ಅನುಕರಣೀಯ. ಆಶ್ರಮದ ಪರಿಸರಕ್ಕೆ ಅಗತ್ಯಕ್ಕಾಗಿ ನಮ್ಮ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳಡಿ ನೀರು ಒದಗಿಸಲು ನಮ್ಮ ಸರ್ಕಾರ ಸಿದ್ಧವಾಗಿದೆ ಎಂದು ಈ ಸಂದರ್ಭದಲ್ಲಿ ತಿಳಿಸಲಾಯಿತು. ಕಾರ್ಯಕ್ರಮದಲ್ಲಿ ಸತ್ಯಸಾಯಿ ಟ್ರಸ್ಟ್ ನ ಸದಸ್ಯರು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

# ಮಾನ್ವಿ ಜೆಡಿಎಸ್ ಕಾರ್ಯಾಲಯದಲ್ಲಿ ಸಾಲುಮರದ ತಿಮ್ಮಕ್ಕ ಅವರಿಗೆ ಶ್ರದ್ಧಾಂಜಲಿ

❑ ನೈಜ್ಯ ದೇಸೆ ನ್ಯೂಸ್

ಮಾನ್ವಿ: ಪದ್ಮಶ್ರೀ ಪುರಸ್ಕೃತ ಸಾಲುಮರದ ತಿಮ್ಮಕ್ಕ ರವರಿಗೆ ಪಟ್ಟಣದ ಜೆಡಿಎಸ್ ಪಕ್ಷದ ಕಾರ್ಯಾಲಯದಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ಅವರು, "ಸಾಲುಮರದ ತಿಮ್ಮಕ್ಕ ಮಹಾತಾಯಿ ನಮ್ಮ ರಾಜ್ಯದ ಹೆಮ್ಮೆ, ದೇಶದ ಸ್ಫೂರ್ತಿ. ಮರಗಳನ್ನು ಮಕ್ಕಳಂತೆ ಬೆಳೆಸಿದ ಅವರ ಸೇವೆ ಯುಗ ಯುಗಾಂತರಕ್ಕೂ ನೆನಪಾಗುವಂತಹದ್ದು. ಹಸಿರು ಸಂಸ್ಕೃತಿಯನ್ನು ಸಮಾಜಕ್ಕೆ ಬೋಧಿಸಿದ



ತಿಮ್ಮಕ್ಕ ಅಮ್ಮನ ಜೀವನವೇ ಪಾಠ. ಅವರ ಹಸಿರು ಕನಸನ್ನು ಮುಂದುವರಿಸುವುದು ನಮ್ಮೆಲ್ಲರ ಜವಾಬ್ದಾರಿ," ಎಂದು ಹೇಳಿದರು.

ನಂತರ ಜೆಡಿಎಸ್ ಪಕ್ಷದ ಮಾನ್ವಿ ತಾಲೂಕ ಅಧ್ಯಕ್ಷ ಈರಣ್ಣ ಮರ್ಲಟ್ಟಿ, ಸಿರವಾರ ತಾಲೂಕು ಅಧ್ಯಕ್ಷ ಟಿ.ಮಲ್ಲಿಕಾರ್ಜುನ ಪಾಟೀಲ್ ಬಲ್ಲಟಗಿ, ತಾಲೂಕು ಮಹಾ ಪ್ರಧಾನ ಕಾರ್ಯದರ್ಶಿ ಪಿ.ರವಿಕುಮಾರ ವಕೀಲರು, ಮುಖಂಡರಾದ ಸೈಯದ್ ಸಾಜಿದ್ ಖಾದ್ರಿ, ಶೌಕತ್ ಅಲಿ, ನಗರ ಘಟಕದ ಅಧ್ಯಕ್ಷ ಹೆಚ್.ಮೌನೇಶ ಗೌಡ ರವರು ಮಹಾತಾಯಿಯ ಪರಿಸರ ಸೇವೆ, ಸರಳತೆ ಮತ್ತು ತ್ಯಾಗದ ಬದುಕಿನ ಬಗ್ಗೆ ಮಾತನಾಡಿದರು. ಈ ಸಂದರ್ಭದಲ್ಲಿ ಪಕ್ಷದ ನಾಯಕರು, ಕಾರ್ಯಕರ್ತರು ಹಾಗೂ ಪರಿಸರ ಪ್ರೇಮಿಗಳು ಮಹಾತಾಯಿಯ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಯುವ ಘಟಕದ ರಾಜ್ಯ ಉಪಾಧ್ಯಕ್ಷ ರಾಜಾ ರಾಮಚಂದ್ರ ನಾಯಕ, ಪ್ರಧಾನ ಕಾರ್ಯದರ್ಶಿ ಯಲ್ಲಪ್ಪ ನಾಯಕ ವಕೀಲರು, ರೈತ ಘಟಕದ ಅಧ್ಯಕ್ಷ ಶರಣಪ್ಪ ಗೌಡ ಮದ್ಲಾಪೂರ, ಪರಿಶಿಷ್ಟ ಪಂಗಡ ಘಟಕದ ಅಧ್ಯಕ್ಷ ವಿಜಯ್ ಕುಮಾರ್, ನಗರ ಯುವ ಘಟಕದ ಅಧ್ಯಕ್ಷ ಎಂ.ಡಿ.ಉಸ್ಮಾನ್, ಚಿನ್ನ ರೆಡ್ಡಿ, ರವಿ ಪಾಟೀಲ್, ನಾಗನಗೌಡ ಆಲ್ದಾಳ್, ಮೌಲಸಾಬ್, ಮೌನೇಶ್ ನಾಯಕ, ಶಿವಕುಮಾರ್ ಚಲ್ಮಲ್, ಸಾಜಿದ್ ಪಾಷಾ, ಬಸವರಾಜ್ ಸ್ವಾಮಿ, ವೀರೇಶ್ ವಿಶ್ವಕರ್ಮ ಸೇರಿದಂತೆ ಇನ್ನಿತರರು ಇದ್ದರು.

## ಸಾಹಿತ್ಯ ಸಿಂಚನ

# ಹಕ್ಕಿ ಬದುಕು

ಹಕ್ಕಿಯೊಂದು ಹಾರಿ ಬಂದು
ಗಿಡದ ಮೇಲೆ ಕುಳಿತುಕೊಂಡು
ಅತ್ತ ಇತ್ತ ನೋಡಿಕೊಂಡು
ಯಾರು ಇಲ್ಲವೆಂದು ತಿಳಿದು
ಆನಂದದಿ ನಲಿಯ ಹತ್ತಿತು??

ದಿನವೂ ಸುತ್ತಾಡಿಕೊಂಡು
ಹುಲ್ಲುಕಡ್ಡಿ ತಂದುಕೊಂಡು
ಗೂಡನೊಂದು ಕಟ್ಟಿಕೊಂಡು
ಯಾರ ತೊಂದರೆ ಯಿಲ್ಲವೆಂದು
ಸಂಭ್ರಮದಿ ಕುಣಿಯಹತ್ತಿತು??

ಹಲವು ದಿನ ಕಳೆದ ಮೇಲೆ
ಮರಿಯ ಹಕ್ಕಿ ಕೂಗಿದಾಗ
ತಾಯಿ ಹಕ್ಕಿ ಗುಟುಕು ನೀಡಿ
ಮಮತೆಯಿಂದ ನೋಡಿಕೊಂಡು
ಸಂತೋಷದಿ ಹಾಡು ಹಾಡಿತು??..

ಬದುಕು ಹೀಗೆ ಎಂದು ತಿಳಿದು
ತಾಯಿ ಹಕ್ಕಿ ತಿಳಿಸಿಕೊಡಲು
ಹಕ್ಕಿಮರಿ ಪ್ರೀತಿಯಿಂದ
ಎಲ್ಲರೊಡನೆ ಬೆಳೆಯಹತ್ತಿ ತು
ಹಕ್ಕಿ ಬದುಕು ಸಾರ್ಥಕಾಯಿತು.

**ಬೀರಪ್ಪ ಶಂಭೋಜಿ**

# ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸಿ ಬೆಳಸಿ ಆರ್. ಸತೀಶಗೌಡ ತುರ್ವಿಹಾಳ

❑ ನೈಜ್ಯ ದೆಸೆ ನ್ಯೂಸ್

**ಬಳಗಾನೂರು:ಮಕ್ಕಳಲ್ಲಿ ಅಡಗಿರುವ ವಿವಿಧ ಬಗೆಯ ಕಲಾಪ್ರತಿಭೆಯನ್ನು ಹೊರತರುವಂತ ಈಪ್ರತಿಭಾಕಾರಂಜಿ, ಕಲೋತ್ಸವ ಪ್ರಥಮ ವೇದಿಕೆಯಾಗಿದೆ. ಶಿಕ್ಷಕರು ನಿರ್ಣಾಯಕರು, ಇಲ್ಲಿ ಹರಳುವ ಮಕ್ಕಳ ಕಲಾಪ್ರತಿಭೆಯನ್ನು ಪ್ರೋತ್ಸಾಹಿಸಿ ಬೆಳಸುವಂತೆ ಮಸ್ಕಿ ಕ್ಷೇತ್ರದ ಶಾಸಕ ಆರ್.ಬಸನಗೌಡ ತುರ್ವಿಹಾಳವರ ಪುತ್ರ ಯುವ ಮುಖಂಡ ಆರ್.ಸತೀಶಗೌಡ ತುರ್ವಿಹಾಳ ಹೇಳಿದರು.**

ಪಟ್ಟಣದ ಪಿಎಂಶ್ರೀ ಸರಕಾರಿ ಹಿರಿಯ ಪ್ರಾಥಮಿಕ ಕೇಂದ್ರ ಶಾಲೆಯಲ್ಲಿ ಕರ್ನಾಟಕ ಸರಕಾರ ಜಿಪಂ ರಾಯಚೂರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರಾಯಚೂರು, ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಅಧಿಕಾರಿಗಳ ಕಾರ್ಯಾಲಯ ಸಿಂಧನೂರು, ಬಳಗಾನೂರು ಸಮೂಹ ಸಂಪನ್ಮೂಲ ಕೇಂದ, ಪಿಎಂಶ್ರೀಸರಕಾರಿ ಹಿರಿಯ ಪ್ರಾಥಮಿಕ ಕೇಂದ್ರ ಶಾಲೆ ಹಮ್ಮಿಕೊಂಡ 2025–26 ನೇ ಸಾಲಿನ ವಲಯ ಮಟ್ಟದ ಪ್ರೌಢ ಶಾಲೆ ಹಾಗೂ ಪ್ರಾಥಮಿಕ



ಶಾಲೆಯ ಮಕ್ಕಳಿಗಾಗಿ ಹಮ್ಮಿಕೊಂಡ ಪ್ರತಿಭಾ ಕಾಂಜಿ, ಕಲೋತ್ಸವ ಕಾರ್ಯಕ್ರಮವನ್ನು ಜೋತಿ ಬೆಳಗಿಸಿ, ಡೋಳ್ಳು ಬಾರಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಉತ್ತಮ ಪ್ರದರ್ಶನ ನೀಡಿದ ಮಕ್ಕಳ ಪ್ರತಿಭೆಯನ್ನುಪ್ರೋತ್ಸಾಹಿಸಿ ಶಾಲೆಯ ಕೀರ್ತಿಯನ್ನು ಇನ್ನಷ್ಟು ಎತ್ತರಕ್ಕೆ ಬೆಳಗಿಸಲಿ ಎಂದರು. ಕಾರ್ಯಕ್ರಮ ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಎಸ್‌ಡಿಎಂಸಿ ಅಧ್ಯಕ್ಷ ಶರಣಬಸವ ಕಂದ್ಗಲ್, ಸಿಆರ್‌ಪಿ ಗಜಾನಂದ ಸೇರಿ ಮುಖಂಡರು, ಶಿಕ್ಷಕರು ಮತ್ತಿತರರು ಕಾರ್ಯಕ್ರಮಕು–ರಿತು ಮಾತನಾಡಿ, ಹಾಗೂ ಕಾರ್ಯಕ್ರಮದಲ್ಲಿ ಪ್ರಾರ್ಥನೆ, ನಾಡಗೀತೆ, ರೈತಗೀತೆ ಹಾಡಿದ ಶಿಕ್ಷಕರು– ಶಿಕ್ಷಕಿಯರು ಗಮನಸೆಳೆದರು.

ಸನ್ಮಾನ : ಕಾರ್ಯಕ್ರಮವನ್ನು ಉದ್ಘಾಟಿಸಿದ ಯುವಮುಖಂಡ ಆರ್.ಸತೀಶಗೌಡ ತುರ್ವಿಹಾಳ, ಬಿಆರ್‌ಪಿ ಮೋಹಿನುದ್ದೀನ್ ಗುಡದೂರು ಇಸಿಓಹುಲುಗಪ್ಪ, ನಿವೃತ್ತ ಎಸಿಓ ಹನುಮಂತಪ್ಪ, ಸೇರಿ ಕಾರ್ಯಕ್ರಮ ನೇರವೇ–ರಿಸಲು ಸೇವೆಸಲ್ಲಿದ ಸೇವಾಧಾರಿಗಳಿಗೆ ಈ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪಪಂ ಅಧ್ಯಕ್ಷ ಶಿವುಕುಮಾರನಾಯಕ, ಉಪಾಧ್ಯಕ್ಷ ಮಂಜುನಾಥಸ್ವಾಮಿ, ಸರಕಾರಿ ಪ್ರೌಢಶಾಲೆಯ ಎಸ್‌ಡಿಎಂಸಿ ಅಧ್ಯಕ್ಷಬಸವರಾಜ ದೋತರಬಂಡಿ, ಮುಖ್ಯಗುರು ಮಹಾದೇವಮ್ಮ, ಪಿಎಂಶ್ರೀ ಸಾಲೆಯ ಮುಖ್ಯ ಗುರು ಮುತ್ತು ಅಂಗಡಿ, ಸೇರಿ ಪಪಂ ಸದಸ್ಯರು, ಮುಖಂಡರು, ಶಿಕ್ಷಣಪ್ರೇಮಿಗಳು, ವಲಯಮಟ್ಟದ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಗಳ ಮುಖ್ಯ ಗುರುಗಳು, ಶಿಕ್ಷಕರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಬಳಗನೂರು: ಪಟ್ಟಣದ ಪಿಎಂ ಶ್ರೀ ಸರಕಾರಿ ಹಿರಿಯ ಪ್ರಾಥಮಿಕ ಕೇಂದ್ರ ಶಾಲೆಯಲ್ಲಿ ಹಮ್ಮಿಕೊಂಡ 2025–26 ನೇ ಸಾಲಿನ ವಲಯ ಮಟ್ಟದ ಪ್ರೌಢ ಶಾಲೆ ಹಾಗೂ ಪ್ರಾಥಮಿಕ ಶಾಲೆಯ ಮಕ್ಕಳಿಗಾಗಿ ಹಮ್ಮಿಕೊಂಡ ಪ್ರತಿಭಾ ಕಾಂಜಿ, ಕಲೋತ್ಸವ ಕಾರ್ಯಕ್ರಮವನ್ನು ಜೋತಿ ಬೆಳಗಿಸಿ, ಡೋಳ್ಳು ಬಾರಿಸುವುದರ ಮೂಲಕ ಯುವಮುಖಂಡ ಆರ್. ಸತೀಶಗೌಡ ತುರ್ವಿಹಾಳ ಉದ್ಘಾಟಿಸಿದ ಮಾತನಾಡಿದರು.

# ಮಸ್ಕಿ ಶಾಸಕ ಆರ್. ಬಸನಗೌಡರಿಗೆ ಸಚಿವ ಸ್ಥಾನ ನೀಡುವಂತೆ ಪುರಸಭೆ ಸದಸ್ಯ ಶಬ್ಬೀರ್ ಸಾಬ್ ಒತ್ತಾಯ




❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ರಾಜ್ಯ ಸೇರಿದಂತೆ ರಾಷ್ಟ್ರ ರಾಜ–ಕಾರಣದ ಗಮನ ಸೆಳೆದಿದ್ದ ಮಸ್ಕಿ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ಸಿಂದ ಗೆದ್ದು ಪಕ್ಷಕ್ಕೆ ಹೊಸ ಚೈತನ್ಯ ತುಂಬಿದ್ದು ಮಸ್ಕಿ ಕ್ಷೇತ್ರ, ಮೀಸಲು ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿ ಕ್ಷೇತ್ರದಲ್ಲಿ ಉತ್ತಮ ಕೆಲಸ ಕಾರ್ಯಗಳನ್ನು ಮಾಡಿ ಪಕ್ಷದ ಹಿತಕ್ಕಾಗಿ ಶ್ರಮಿಸುತ್ತಿರುವ ಶಾಸಕ ಆರ್.ಬಸನಗೌಡ ತುರ್ವಿಹಾಳ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಪುರಸಭೆ ನಾಮನಿರ್ದೇಶನ ಸದಸ್ಯ ಶಬ್ಬೀರ್ ಸಾಬ್ ಚೌದ್ರಿ ಒತ್ತಾಯಿಸಿದರು.

ಮಸ್ಕಿ ಪಟ್ಟಣದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ಮಸ್ಕಿ ವಿಧಾನಸಭಾ ಕ್ಷೇತ್ರವು ಮೀಸಲು ಕ್ಷೇತ್ರವಾಗಿದ್ದು ಮಸ್ಕಿ ಕ್ಷೇತ್ರದ ಶಾಸಕರಿಗೆ ಸಚಿವ ಸ್ಥಾನ ನೀಡಿದರೆ ಈ ಭಾಗದ ಅಭಿವೃದ್ಧಿ ಆಗುವ ಜೊತೆಗೆ ಪಕ್ಷ ಸಂಘಟನೆಗೂ ಹೆಚ್ಚಿನ ಮಹತ್ವ ನೀಡಿದಂತಾಗುತ್ತದೆ ಆದ್ದರಿಂದ ರಾಜ್ಯ ಕಾಂಗ್ರೆಸ್ ನಾಯಕರು ಶಾಸಕ ಆರ್ ಬಸನಗೌಡ ಅವರಿಗೆ ಸಚಿವ ಸ್ಥಾನ ನೀಡಬೇಕು. ಎಂದು ಒತ್ತಾಯಿಸಿದರು ನಂತರ ಯುವ ಮುಖಂಡ ದುರ್ಗರಾಜ ವಟಗಲ್ ಮಾತನಾಡಿ ಮಸ್ಕಿ ಕ್ಷೇತ್ರವು ಮೀಸಲು ಕ್ಷೇತ್ರವಾಗಿರುವುದರಿಂದ ಇಲ್ಲಿನ ಶಾಸಕ–ರಿಗೆ ಸಚಿವ ಸ್ಥಾನ ನೀಡುವುದರಿಂದ ಈ ಭಾಗ ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಅಲ್ಲದೆ ಮಸ್ಕಿ ಕ್ಷೇತ್ರದ ಶಾಸಕರು ಹಗಲಿರುಳು ಎನ್ನದೆ ಪ್ರತಿನಿತ್ಯ ಕ್ಷೇತ್ರ ಸಂಚಾರ ಮಾಡಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸುತ್ತಿದ್ದಾರೆ ಆದ್ದರಿಂದ ಶಾಸಕ ಆರ್ ಬಸನಗೌಡ ತುರುವಿಹಾಳ ಅವ–ರಿಗೆ ಸಚಿವ ಸ್ಥಾನ ನೀಡುವುದರಿಂದ ಕ್ಷೇತ್ರದ ಅಭಿವೃದ್ಧಿ ಜೊತೆಗೆ ಜಿಲ್ಲೆ ಅನುಕೂಲವಾಗಲಿದೆ ಎಂದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಯುವ ಮುಖಂಡರಾದ ಬಸವರಾಜ ಕೊಠಾರಿ, ಕಾಶಿಮಪ್ಪ ಡಿ ಮುರಾರಿ, ನೂರ್ ಅಹಮದ್ ಸೇರಿದಂತೆ ಇತರರು ಇದ್ದರು.

# ಶಾಲಾ ವಾಹನಕ್ಕೆ ಟಾಟಾ ಏಸ್ ಡಿಕ್ಕಿ: ವಿದ್ಯಾರ್ಥಿಗಳಿಗೆ ಸಣ್ಣ ಪುಟ್ಟ ಗಾಯ

❑ ನೈಜ್ಯ ದೆಸೆ ನ್ಯೂಸ್

**ಮುದುಗಲ್: ಸಮೀಪದ ಕೆ.ಮರಿಯಮ್ಮನಹಳ್ಳಿ ಬಳಿ ಜೆಎಂಜೆ ಶಾಲೆಯ ವಾಹನಕ್ಕೆ ಟಾಟಾ ಏಸ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಎಂಟು ವಿದ್ಯಾರ್ಥಿಗಳಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಶಾಲಾ ವಾಹನ ಕೆ.ಮರಿಯಮ್ಮನಹಳ್ಳಿಯಿಂದ ಮುದಗಲ್ ಪಟ್ಟಣಕ್ಕೆ ಬರುತ್ತಿತ್ತು. ಈ ವೇಳೆ ಟಾಟಾ ಏಸ್ ವಾಹನ ಡಿಕ್ಕಿ ಹೊಡೆದಿದೆ.**



ಅಬ್ರಹಾಂ ಚಾಂದಾ ಪಾಷಾ, ಇಮ್ರಾನ್ ಚಾಂದಾ ಪಾಷಾ, ಸಬಾ ಮುದಗಲ್, ಶ್ರೀನಿವಾಸ ರಾಮಣ್ಣ ಉಪ್ಪಾರ ಎಂಬ ವಿದ್ಯಾರ್ಥಿಗಳಿಗೆ ತೀವ್ರ ಸ್ವರೂಪದ ಗಾಯಗಳಾಗಿವೆ. ಕೆಲವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಗಾಯಗೊಂಡ ವಿದ್ಯಾರ್ಥಿಗಳನ್ನು ಮುದಗಲ್‌ನ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿದೆ. ಮೂವರು ವಿದ್ಯಾರ್ಥಿಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಲಿಂಗಸುಗೂರು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ.

# ಕವಿತಾಳ– ಸ್ವಚ್ಛತಾ ರ್‍ಯಾಲಿ, ನಶಾಮುಕ್ತ ಭಾರತಪ್ರತಿಜ್ಞಾ ವಿಧಿ ಬೋಧನೆ

❑ ನೈಜ್ಯ ದೆಸೆ ನ್ಯೂಸ್

**ಕವಿತಾಳ ಪಟ್ಟಣದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ನಗರಾಭಿವೃದ್ಧಿಕೋಶ ರಾಯಚೂರು ಹಾಗೂ ಪಟ್ಟಣ ಪಂಚಾಯತಿ ಕವಿತಾಳ ಇವರ ಸಹಹೋಗದಲ್ಲಿ ಸ್ವಚ್ಛತೆಯೇ ಸೇವೆ–2025 ಸ್ವಚ್ಛತಾ ರ್‍ಯಾಲಿಯನ್ನು ಹಮ್ಮಿಕೊಳ್ಳಲಾಗಿತ್ತು.**

ರ್‍ಯಾಲಿಲಿಗೆ ಪಟ್ಟಣ ಪಂಚಾಯತಿ ಅಧ್ಯಕ್ಷೆ ಖಾಸಿಂಬೀ ಚಾಂದಪಾಷಾ ಅವರು ಚಾಲನೆ ನೀಡಿದರು, ರ್‍ಯಾಲಿಯು ಸರ್ಕಾರಿ ಪ್ರೌಢ ಶಾಲೆಯಿಂದ ಪ್ರಾರಂಭವಾಗಿ ಮುಖ್ಯ ರಸ್ತೆಯ ಮುಲಕ ಸಂತೆ ಬಜಾರ್, ಆನ್ವರಿ ರಸ್ತೆಯಿಂದ ಮರಳಿ ಶಾಲಾ ಆವರಣಕ್ಕೆ



ಬಂದು ಸೇರಿತು ಈ ರ್‍ಯಾಲಿಯಲ್ಲಿ ಬಾಲಕಿಂ–ಮರ ಸರ್ಕಾರಿ ಪ್ರೌಢ ಶಾಲೆ ಮತ್ತು ಬಾಲಕರ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಮತ್ತು ಶಿಕ್ಷಕರು, ಪಟ್ಟಣ ಪಂಚಾಯತಿ ಸದಸ್ಯರು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಪಟ್ಟಣ ಪಂಚಾಯತಿಯಲ್ಲಿ ನಶಾಮುಕ್ತ ಭಾರತ ಪ್ರತಿಜ್ಞಾ ವಿಧಿ ಬೋಧಿಸುವುದರ ಜೊತೆಗೆ ಸ್ವಚ್ಛತಾ ಅಭಿಯಾನಕ್ಕೆ ಪ್ರೋತ್ಸಾಹಿಸುವಂತೆ ಸಾರ್ವಜನಿಕರಿಂದ ಸಹಿ ಸಂಗ್ರಹಿಸಲಾಯಿತು. ನಂತರ ಮುಖ್ಯಾಧಿಕಾರಿ ಜಸ್‌ಪಾಲ್ ಸಿಂಗ್



ಮಾತನಾಡಿ' ಪಟ್ಟಣದಲ್ಲಿ ವಾಸಿಸುವ ಪ್ರತಿಯೊಬ್ಬರು ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸ್ವಚ್ಛತಾ ಅಭಿಯಾನಕ್ಕೆ ಸಹಕಾರ ನೀಡಬೇಕು ಎಂದು' ಸಾರ್ವಜನಿಕರಿಗೆ ತಿಳಿಸಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಅಧ್ಯಕ್ಷೆ, ಉಪಾದಕ್ಷೆ ಸೇರಿದಂತೆ ಸದಸ್ಯರು, ವಿವಿಧ ಪಕ್ಷ ಹಾಗೂ ವಿವಿಧ ಸಂಘಟನೆಗಳ ಮುಖಂಡರು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು

# ತರಕಾರಿ ಬೀಜದ ಕಿಟ್ ಗಳಿಗಾಗಿ ಅರ್ಜಿ ಆಹ್ವಾನ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ನವೆಂಬರ್ 18 (ಕರ್ನಾಟಕ ವಾರ್ತೆ): ಇಲ್ಲಿನ ತೋಟಗಾರಿಕೆ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ, ವಿವೋಚನ ನಿಧಿಯ ಸಾಮಾನ್ಯ ಉಪಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರಿಗೆ ವಿವಿಧ ಬಗೆಯ ತರಕಾರಿ ಬೀಜದ ಕೀಟಗಳನ್ನು ವಿತರಿಸಲು ಅರ್ಹ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

ಈ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರಿಗೆ ಪ್ರದೇಶ ವಿಸ್ತರಣೆ ಲಭ್ಯತೆಗೆ ಅನುಗುಣವಾಗಿ ಗರಿಷ್ಟ ರೂ.20000 ಮೊತ್ತದ ವಿವಿಧ ಬಗೆಯ ತರಕಾರಿ ಬೀಜದ ಕೀಟಗಳನ್ನು ತೋಟಗಾ–ರಿಕೆ ಇಲಾಖೆಯಿಂದ ವಿತರಿಸಲಾಗುತ್ತಿದ್ದು, ಆಸಕ್ತಿಯುಳ್ಳ ರೈತರು ತಮ್ಮ ತಾಲೂಕಿನ ಹಿರಿಯ ಸಹಾಯಕ ತೋಟಗಾ–ರಿಕೆ ನಿರ್ದೇಶಕರು ಜಿಲ್ಲಾ ಪಂಚಾಯತ್ ಹಾಗೂ ತಾಲೂಕಿನ ಕಚೇರಿಗಳ ಹೋಬಳಿ ಮಟ್ಟದ ರೈತಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ ಹಿ ಪ್ರಾ ಶಾಲೆ ಆರ್ ಎಚ್ ನಂ 1 ವಿದ್ಯಾರ್ಥಿನಿ ಕು. ರಾಜೇಶ್ವರಿ ಹರ್ಡಲ್ಸ್ ಸ್ಪರ್ಧೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ರಾಜ್ಯಕ್ಕೆ ಮಟ್ಟಕ್ಕೆ ಆಯ್ಕೆ



❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜಿಲ್ಲೆ ಮಟ್ಟದಲ್ಲಿ ನಡೆದ 14 ವರ್ಷದೊಳಗಿನ ಬಾಲಕಿಯರ 800 ಮೀಟರ್ ಹರ್ಡಲ್ಸ್ ಕ್ರೀಡಾ ಸ್ಪರ್ಧೆಯಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಆರ್‌ಎಚ್ ನಂ.?1 ಇದರ ಪ್ರತಿಭಾವಂತ ವಿದ್ಯಾರ್ಥಿನಿ ಕುಮಾರಿ ರಾಜೇಶ್ವರಿ ಪ್ರಥಮ ಸ್ಥಾನ ಪಡೆಯುವ ಮೂಲಕ ಅತ್ಯುತ್ತಮ ಸಾಧನೆ ಮಾಡಿದ್ದಾಳೆ. ಈ ಜಯದೊಂದಿಗೆ ಅವರು ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿರುವುದು ಶಾಲೆ ಹಾಗೂ ಗ್ರಾಮದ ಹೆಮ್ಮೆಯ ವಿಷಯವಾಗಿದೆ.**

ಶಾಲೆಯ ಮುಖ್ಯಗುರುಗಳಾದ ಶ್ರೀ ಉಮೇದ್ ಅವರು ವಿದ್ಯಾರ್ಥಿಗಳಿಗೆ ಉತ್ತಮ ತರಬೇತಿಯನ್ನು ನೀಡಿ, ಕ್ರೀಡಾಕ್ಷೇತ್ರದಲ್ಲಿ ರಾಜ್ಯಮಟ್ಟಕ್ಕೆ ತೆರಳುವಂತೆ ಪ್ರೋತ್ಸಾಹಿಸಿದ್ದಕ್ಕಾಗಿ ಸಾರ್ವಜನಿಕರಿಂದ ಪ್ರಶಂಸೆ ವ್ಯಕ್ತವಾಗಿದೆ. ಈ ಸಾಧನೆಗೆ ಎಸ್.ಡಿ.ಎಂ.ಸಿ ಸದಸ್ಯರು ಶುಭಹಾರೈಸಿ, ರಾಜೇಶ್ವ–ರಿಗೆ ರಾಜ್ಯಮಟ್ಟದಲ್ಲಿಯೂ ಉತ್ತಮ ಪ್ರದರ್ಶನ ನೀಡುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀ ರಹಮದ್ ಪಾಷಾ ಅವರು, “ನಮ್ಮ ಆರ್‌ಎಚ್ ನಂ.1 ಶಾಲೆಯ ವಿದ್ಯಾರ್ಥಿನಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವುದು ನಮ್ಮ ಗ್ರಾಮದ ಹಾಗೂ ಪಂಚಾಯಿತಿಯ ಗೌರವವನ್ನು ಹೆಚ್ಚಿಸಿದೆ,” ಎಂದು ಹರ್ಷ ವ್ಯಕ್ತಪಡಿಸಿದ್ದಾರೆ. ಗ್ರಾಮದ ಗ್ರಾಮಸ್ಥರು, ಕ್ರೀಡಾಭಿಮಾನಿಗಳು, ಶಾಲಾ ಸಿಬ್ಬಂದಿ ಹಾಗೂ ಆರ್‌ಎಚ್ ನಂ.1 ಶಾಲೆಯ ಎಲ್ಲಾ ಸದಸ್ಯರು ಕುಮಾರಿ ರಾಜೇಶ್ವ–ರಿಗೆ ಹೃತ್ಪೂರ್ವಕ ಶುಭಾಶಯಗಳನ್ನು ತಿಳಿಸಿ, ರಾಜ್ಯಮಟ್ಟದಲ್ಲಿಯೂ ಕಿರೀಟ ಮುಡಿಸಲಿ ಎಂದು ಹಾರೈಸಿದ್ದಾರೆ.

# ಸೌದಿ ಬಸ್ ದುರಂತ; ಹುಬ್ಬಳ್ಳಿಯ ಅಬ್ದುಲ್ ಗನಿ ಶಿರಹಟ್ಟಿ ಸಾವು ಅಬ್ದುಲ್ ಗನಿ ಕುಟುಂಬಕ್ಕೆ ಸಚಿವ ಜಮೀರ್ ನೆರವು

❑ ನೈಜ್ಯ ದೆಸೆ ನ್ಯೂಸ್

**ಹುಬ್ಬಳ್ಳಿಯ ವ್ಯಕ್ತಿಯೊಬ್ಬ ತನ್ನ ಕುಟುಂಬವನ್ನು ಬಿಟ್ಟು ದುಬೈಗೆಂದು ದುಡಿಯುದಕ್ಕೆ ಹೋಗಿದ್ದ, ಸ್ವಲ್ಪ ದಿನಾ ರಜಾ ಹಾಕಿ ತನ್ನ ಹುಟ್ಟುರು ಅಂದ್ರೆ ಹುಬ್ಬಳ್ಳಿಗೆ ಬರುತ್ತಿದ್ದ, ಬರುವಾಗ ತನ್ನ ಸ್ನೇಹಿತರ ಜೊತೆ ಸೌದಿ ಅರೇಬಿಯಾದ ಮೆಕ್ಕಾಗೆ ಹೋಗುವಾಗ, ಭಾರತಿಯ–ರಿದ್ದ ಬಸ್ ದುರಂತದಿಂದ ಇಡೀ 42 ಜನರು ಸಜೀವ ದಹನವಾಗಿರುವ ದಾರುಣ ಮರಣ ಹೊಂದಿದ್ದಾರೆ. ಅದರಲ್ಲಿ ಹುಬ್ಬಳ್ಳಿಯ ಗಣೇಶಪೇಟಗ್ ನಿವಾಸಿ ಅಬ್ದುಲ್ ಗಣಿ ಶಿರಹಟ್ಟಿ ಕೂಡ ಸಾವನ್ನಪ್ಪಿದ್ದಾರೆ. ಹುಬ್ಬಳ್ಳಿಯಲ್ಲಿ ಅವರ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.**

ಹೌದು,,, ಅಬ್ದುಲ್ ಗನಿ ಶಿರಹಟ್ಟಿ ಸುಮಾರು ವರ್ಷಗಳಿಂದ ದುಬೈದಲ್ಲಿ ಕೆಲಸ ಮಾಡುತ್ತಿದ್ದ, ಹೈದರಾಬಾದ್ ದಿಂದ ಆತನ ಸ್ನೇಹಿತರು ಮೆಕ್ಕಾಗೆ ಹೋಗಿ ಬರೋಣ ಎಂದು ಹೇಳಿದ್ದಾರೆ. ಆಗ ಅಬ್ದುಲ್ ಕೂಡ ದುಬೈಯಿಂದ ಹೋಗಿದ್ದಾರೆ. ಎಲ್ಲರೂ ಸೇರಿ ಪವಿತ್ರ ಮೆಕ್ಕಾ ಉಮ್ರಾ



ಯಾತ್ರೆಗೆಂದು ಸೌದಿ ಅರೇಬಿಯಾಕ್ಕೆ ತೆರಳಿದ್ದಾಗ 42 ಜನ ಭಾರತೀಯರು ಇದ್ದ ಬಸ್ ಪೆಟ್ರೋಲ್ ಟ್ಯಾಂಕರ್‌ಗೆ ಡಿಕ್ಕಿ ಹೊಡೆದ ಪರಿಣಾಮ, ಈ ಬಸ್ ನಲ್ಲಿ ಪ್ರಯಾಣಿಸುತ್ತಿದ್ದ ಎಲ್ಲ 42 ಜನ ಭಾರತೀಯರು ಸಜೀವ ದಹನವಾಗಿರುವ ದಾರುಣ ಘಟನೆ ನಡೆದಿದೆ. ಆ ದುರ್ಗಟನೆಯಲ್ಲಿ ಹುಬ್ಬಳ್ಳಿಯ ಅಬ್ದುಲ್ ಕೂಡ ಮರಣ ಹೊಂದಿದ್ದಾರೆ. ಈಗ ಕುಟುಂಬಸ್ಥರು ಕಣ್ಣೀರಲ್ಲಿ ಕೈ ತೊಳೆಯುತ್ತಿದ್ದಾರೆ. ಇನ್ನು ಅಬ್ದುಲ್ ಅವರಿಗೆ ಹೆಂಡತಿ 4 ಮಕ್ಕಳನ್ನು ಅಗಲಿದ್ದಾರೆ. ಎಂದು ವ–ರಿದಿತಿಳಿದ್ದು ಬಂದಿದೆ ಸದರಿ ಕುಟುಂಬಂಸ್ಥರ ಮನೆಯ ಮುಂದೆ ಸಂಬಂಖಕರ ಆಕ್ರಂದನ ಮುಗಿಲುಮುಟ್ಟಿದೆ. ಇಡೀ ಅವರ ಹಾದಿಗೆ ಕಾಯುತ್ತಿದೆ

*ಅಬ್ದುಲ್ ಗನಿ ಕುಟುಂಬಕ್ಕೆ ಸಚಿವ ಜಮೀರ್ ನೆರವು

ಮದೀನಾ ಅಗ್ನಿ ದುರಂತದಲ್ಲಿ ಮೃತಪಟ್ಟ ಹುಬ್ಬಳ್ಳಿ ಮೂಲದ ಅಬ್ದುಲ್ ಗನಿ ಶಿರಹಟ್ಟಿ ಅವರ ಕುಟುಂಬಕ್ಕೆ ಸಚಿವ ಜಮೀರ್ ಅಹಮದ್ ಖಾನ್ ನೆರವಾಗಿದ್ದಾರೆ. ಮೃತ ಅಬ್ದುಲ್ ಗನಿ ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆ ನಡೆಸಲು ಅವರ ಕುಟುಂಬದ ಮೂವರು ಸದಸ್ಯರು ಮದೀನಾಗೆ ತೆರಳಲು ವೀಸಾ ಸೇರಿದಂತೆ ವಿಮಾನ ಟಿಕೆಟ್, ಅಲ್ಲಿ ಉಳಿದುಕೊಳ್ಳಲು ಹೋಟೆಲ್ ಹಾಗೂ ಇತರೆ ವ್ಯವಸ್ಥೆ ಮಾಡಿಕೊಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಅಬ್ದುಲ್ ಗನಿ ಅವರ ಕುಟುಂಬ ಸದಸ್ಯರಾದ ಉಮರ್ ಸಾಬ್,ಮೌಲಾ ಅಲಿ,ಮೈನುದ್ದಿನ್ ಮಖಂದರ್ ಅವರು ಮಂಗಳವಾರಬೆಂಗಳೂರಿಂದ ಮದೀನಾ ಗೆ ತೆರಳಿದರು. ಅಂತ್ಯಕ್ರಿಯೆ ನಂತರ ಮೂವರು ಉಮ್ರಾ ಯಾತ್ರೆ ಮಾಡಿ ವಾಪಸ್ ಬರಲು ಸಚಿವರು ವ್ಯವಸ್ಥೆ ಮಾಡಿಕೊಟ್ಟಿದ್ದಾರೆ. ಮಾರ್ಗ ಮಧ್ಯೆ ವೆಚ್ಚಕ್ಕೆ ಆರ್ಥಿಕ ಸಹಾಯ ಮಾಡಿದ್ದಾರೆ. ಘಟನೆ ಹಿನ್ನಲೆ ಯಲ್ಲಿ ಅಬ್ದುಲ್ ಗನಿ ಕುಟುಂಬ ಸದಸ್ಯರು ಮದೀನಾ ಗೆ ತೆರಳಲು ಸಂಕಷ್ಟ ಎದು–ರಿಸುತ್ತಿರುವ ಬಗ್ಗೆ ಮಾಹಿತಿ ಪಡೆದ ಸಚಿವರು ಖುದ್ದು ಬೆಂಗಳೂರಿಗೆ ಕರೆಸಿಕೊಂಡು ವ್ಯವಸ್ಥೆ ಮಾಡಿದರು. ಅವರ ಕುಟುಂಬಕ್ಕೆ ಬೇಕಾದ ಎಲ್ಲ ರೀತಿಯ ನೆರವು ಕಲ್ಪಿಸುವಂತೆ ಹಜ್ ಸಮಿತಿ ಕಾರ್ಯ ನಿರ್ವಹಣಾ ಧಿಕಾರಿ ಸಾರ್ಫ಼ಾರಾಜ್ ಖಾನ್ ಅವರಿಗೆ ಸೂಚನೆ ನೀಡಿದರು.

## ನೇಮಕಾತಿ ಪ್ರಕಟಣೆ

CUK ನೇಮಕಾತಿ 2025: 81 ಪ್ರಾಧ್ಯಾಪಕರು, ವೈದ್ಯಕೀಯ ಅಧಿಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯವು ಅಧಿಕೃತ ಅಧಿಸೂಚನೆಯ ಅಕ್ಟೋಬರ್ 2025 ರ ಮೂಲಕ ಪ್ರಾಧ್ಯಾಪಕರು, ವೈದ್ಯಕೀಯ ಅಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕಲಬುರಗಿ – ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 30–ಅಕ್ಟೋಬರ್–2025 ರಂದು ಅಥವಾ ಮೊದಲು ಆನ್‌ಲೈನ್/ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು (ಕೊನೆಯ ದಿನಾಂಕವನ್ನು 20–ನವೆಂಬರ್–2025 ರವರೆಗೆ ವಿಸ್ತರಿಸಲಾಗಿದೆ) Official Website: cuk.ac.in ಕೊನೆಯ ದಿನಾಂಕ 20–ನವೆಂಬರ್–2025

## ಮಾಹಿತಿ ಆಯುಕ್ತ ವೆಂಕಟಸಿಂಗ್‌ಗೆ ಸನ್ಮಾನ

❏ ನೈಜ್ಯ ದೆಸೆ ನ್ಯೂಸ್



ಮಠ ಮಾನ್ಯಗಳ ಅಭಿವೃದ್ಧಿ?ಗೆ ಭಕ್ತರ ಕೊಡುಗೆ ಮತ್ತು ಸಹಕಾರ ಅಗತ್ಯ ಎಂದು ಸೋಮವಾರ ಪೇಟೆ ಹಿರೇಮಠದ ಪೀಠಾಧಿಪತಿ ಶ್ರೀ ಅಭಿನವ ರಾಚೋಟಿ ಶಿವಾಚಾರ್ಯ ಸ್ವಾಮೀಜಿ ಅಭಿಪ್ರಾಯ ಪಟ್ಟರು. ಭಾನುವಾರ ಶ್ರೀಮಠದಲ್ಲಿ ಜರುಗಿದ ಕಾರ್ತಿಕ ಮಾಸದ ದೀಪೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಸೋಮವಾರ ಪೇಟೆ ಶ್ರೀ ಮಠ ಅನೇಕ ಧಾರ್ಮಿಕ, ಸಾಮಾಜಿಕ, ಚಟುವಟಿಕೆ ನಡೆಸುತ್ತಿದ್ದು, ಇದಕ್ಕೆ? ಲಿಂಗೈಕ್ಯ ಶ್ರೀಗಳ ಆಶೀರ್ವಾದ ಹಾಗೂ ಮಠದ ಭಕ್ತರ ಸಹಕಾರವೇ ಕಾರಣ ಎಂದರು.

ಮಠ ಮಾನ್ಯಗಳಲ್ಲಿ ಧಾರ್ಮಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಚಟುವಟಿಕೆಗಳು ನಡೆಯಲು ಭಕ್ತರ ಕೊಡುಗೆ ಅಗತ್ಯ. ಈ ದಿಸೆಯಲ್ಲಿ ಸೋಮವಾರ ಪೇಟೆ ಹಳೆಯ ಮಠದ ಶಿಲಾ ಮಂಟಪ ಕಾರ್ಯಕ್ಕೆ? ಸಕಲರ ಸಹಕಾರ ಅಗತ್ಯ. ಶ್ರೀ ಮಠಕ್ಕೆ? ಸಚಿವ ಎನ್. ಎಸ್ ಬೋಸರಾಜ್ ಅವರು 10. ಲ.ರೂ ದೇಣಿಗೆ ನೀಡಿದ್ದಾರೆ ಎಂದರು. ಬಿ. ವೆಂಕಟ್‌ಸಿಂಗ್ ಅವರು ರಾಜ್ಯ ಮಾಹಿತಿ ಆಯುಕ್ತರಾಗಿ ನೇಮಕವಾಗಿರುವುದು ಜಿಲ್ಲೆ?ಗೆ ಹೆಮ್ಮೆ?ಯ ಸಂಗತಿ. ಕಳೆದ 38 ವರ್ಷ ಸುದ್ದಿಮೂಲ ಪತ್ರಿಕೆಯಲ್ಲಿ ಕೆಲಸ ಮಾಡಿದ ಪ್ರಾಮಾಣಿಕವಾಗಿ ತನ್ನ ವೃತ್ತಿಯನ್ನು ಶ್ರದ್ಧೆ?ಯಿಂದ ಮಾಡಿದ ಕಾರಣ ಸರಕಾರ ಹಾಗೂ ಮಾಧ್ಯಮ ಕ್ಷೇತ್ರದಲ್ಲಿ ಅನೇಕ ಪ್ರಶಸ್ತಿಗಳು ಪಡೆದಿದ್ದು ಇಂದು ಆಯುಕ್ತರಾಗಿರುವುದು ಜಿಲ್ಲೆ?ಗೆ ಗೌರವದ ಸಂಗತಿ ಎಂದರು.

ಶ್ರೀ ಮಠದಿಂದ ಏರ್ಪಡಿಸಿದ ಸನ್ಮಾ?ನ ಸ್ವೀಕರಿಸಿ ಮಾತನಾಡಿದ ಮಾಹಿತಿ ಆಯುಕ್ತರಾದ ಬಿ.ವೆಂಕಟಸಿಂಗ್, ತಮ್ಮ ಜೀವನದ ಅತ್ಯಂತ ಸ್ಮರಣೀಯ ದಿನ ಇದಾಗಿದೆ. ಶ್ರೀ ಮಠದ ಈ ಗೌರವ ಜವಾಬ್ದಾ?ರಿ ಹೆಚ್ಚಿಸಿದೆ. ನನಗೆ ದೊರೆತ ಹುದ್ದೆ?ಯ ಈ ಅವಕಾಶ ಜನಪರ, ನ್ಯಾ?ಯ ಪರವಾಗಿ ನಿರ್ವಹಿಸುವ ಇಂಗಿತ ವ್ಯಕ್ತಪಡಿಸಿದರು. ಮಾಹಿತಿ ಹಕ್ಕು ಕಾಯ್ದೆ ಪ್ರಜಾಪ್ರಭುತ್ವ ವ್ಯವಸ್ಥೆ?ಯಲ್ಲಿ ಜನರ ಕೇಳುವ ಹಕ್ಕು ಇಮ್ಮಡಿಗೊಳಿಸುವುದರ ಜೊತೆಗೆ ಆಡಳಿತದಲ್ಲಿ ಪಾರದರ್ಶಕತೆ ಹಾಗೂ ಅಕ್ರಮ ತಡೆಯಲು ಅನುಕೂಲವಾಗಲಿದೆ ಎಂದು ಅಭಿಪ್ರಾ?ಯ ಪಟ್ಟರು.

ತಮ್ಮ ಕಲ್ಬುರ್ಗಿ ಪೀಠದಲ್ಲಿ ಬಾಕಿ ಇರುವ ಏಳು ಸಾವಿರ ಪ್ರಕರಣಗಳು ಶೀಘ್ರವಾಗಿ ವಿಲೇವಾರಿಗೆ ಆದ್ಯತೆ ನೀಡಿ ಮಾಹಿತಿ ಹಕ್ಕು ಮೂಲ ಉದ್ದೇಶ ಈಡೇರಿಸಲು ಪ್ರಯತ್ನ ಮಾಡುವುದಾಗಿ ಹೇಳಿದರು. ಶ್ರೀ ಮಠ ರಾಯಚೂರು ಜಿಲ್ಲೆ?ಯಲ್ಲಿ ಧಾರ್ಮಿಕ ಸಂಸ್ಕಾ?ರ ನೀಡುವಲ್ಲಿ ಅಪಾರ ಕೊಡುಗೆ ನೀಡಿದೆ. ಇದರಿಂದಾಗಿ ರಾಯಚೂರು ಜಿಲ್ಲೆ? ಶಾಂತಿ–ಸೌಹಾರ್ದತೆ ಕಾಪಾಡಿಕೊಂಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಾಂಗ್ರೆ?ಸ್ ಮುಖಂಡ ರವಿ ಬೋಸರಾಜು ಮಾತನಾಡಿ, ಶ್ರೀ ಮಠದ ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ–ಚಟುವಟಿಕೆಗಳ ಬಗ್ಗೆ? ಮೆಚ್ಚುಗೆ ವ್ಯಕ್ತಪಡಿಸಿದರು. ಧಾರ್ಮಿಕ ವಿಚಾರಗಳು ಜನರಲ್ಲಿ ಪಸರಿಸಿ, ಜನರಲ್ಲಿ ಶಾಂತಿ ಕಾಪಾಡುವಲ್ಲಿ ಶ್ರೀಮಠದ ಕೊಡುಗೆ ಅಪಾರವಾಗಿದೆ ಎಂದರು.

ಈ ವೇಳೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಶಾಂತಪ್ಪಫ಼ಿ, ಹಟ್ಟಿ?ಚಿನ್ನದಗಣಿ ಮಾಜಿ ಅಧ್ಯಕ್ಷ ಗಿರಿಜಾ ಶಂಕರ ಮಾತನಾಡಿದರು. ದೀಪೋತ್ಸವಕ್ಕೆ? ಚಾಲನೆ : ಇದೇ ವೇಳೆ ಶ್ರೀಗಳ ವಿಶೇಷ ಪೂಜೆ ನೆರವೇರಿಸಿ ದೀಪೋತ್ಸವಕ್ಕೆ? ಚಾಲನೆ ನೀಡಿದರು. ಅಸಂಖ್ಯಾ?ತ ಭಕ್ತರು ಭಾಗವಹಿಸಿದ್ದರು. ವೇದಿಕೆ ಮೇಲೆ ಪಾಲಿಕೆ ಉಪಮೇಯರ್ ಸಾಜೀದ್ ಸಮೀರ್, ಸದಸ್ಯೆ? ಲಲಿತಾ ಕಡಗೋಲ, ಆರ್‌ಡಿಎ ಮಾಜಿ ಅಧ್ಯಕ್ಷ ತಿಮ್ಮಪ್ಪ ನಾಡಗೌಡ, ವೆಂಕಟಾಪುರ ಷಣ್ಮುಖಪ್ಪಫ಼ಿ, ಪುಂಡ್ಲ ರಾಜೇಂದ್ರರೆಡ್ಡಿ?ಫ಼ಿ, ಅಕ್ಕನ ಬಳಗ ಮಹಿಳಾ ಮಂಡಲದ ಪದಾಧಿಕಾರಿ ಸುಮಂಗಳಮ್ಮ ಸೇರಿದಂತೆ ಮತ್ತಿ?ತರರು ಉಪಸ್ಥಿ?ತರಿದ್ದರು.

## ಕ್ರೀಡೆಗಳು ದೈಹಿಕ ಸದೃಢತೆ, ಮಾನಸಿಕ ಆರೋಗ್ಯ ಮತ್ತು ಉತ್ತಮ ಜೀವನಶೈಲಿಯನ್ನು ಉತ್ತೇಜಿಸುತ್ತವೆ: ಚಿದಾನಂದ ಸಾಲಿ

❏ ನೈಜ್ಯ ದೆಸೆ ನ್ಯೂಸ್

ರಾಜ್ಯಮಟ್ಟದ 14 ಮತ್ತು 17 ವಯೋಮಾನದ ಒಳಗಿನ ಬಾಲಕರ ಮತ್ತು ಬಾಲಕಿಯರ ಶಟಲ್ ಬ್ಯಾಟ್ಮಿಟನ್ ಪಂದ್ಯಾವಳಿ ರಾಯಚೂರು ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಜರುಗಿತು. ಈ ಕಾರ್ಯಕ್ರಮವನ್ನು ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳಾದ ಕೆ. ರಂಗಸ್ವಾಮಿ ಇವರು ಉದ್ಘಾಟಿಸಿದರು.

ಈ ಕ್ರೀಡಾ ಕೂಟದ ನೋಡಲ್ ಅಧಿಕಾರಿ



ಪರಶುರಾಮ ಹುಜರತಿ, ಜಿಲ್ಲಾ ಗ್ರೇಡ್–1 ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷರಾದ ಯಂಕಪ್ಪ ಪಿರಂಗಿ ಹಾಗೂ ಗ್ರೇಡ್–2 ದೈ.ಶಿಕ್ಷಕರ ಸಂಘದ ಅಧ್ಯಕ್ಷ ಶಂಕ್ರಪ್ಪ ಮಾಲಿ ಪಾಟೀಲ್, ಹಿರಿಯ ದೈಹಿಕ ಶಿಕ್ಷಕರಾದ ಮಲ್ಲಪ್ಪ ಹಮದರ್ದ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪ್ರಾಂಶುಪಾಲರಾದ ಡಾ. ಚಿದಾನಂದ ಸಾಲಿ, ದೈಹಿಕ ಶಿಕ್ಷಕ ಗುರುನಾಥ ಅಂಬಿಗೇರ,, ಶಿಕ್ಷಣ ಸಂಯೋಜಕ ರಾಮಕೃಷ್ಣ ಕಟ್ಟಾವಲಿ ಮುಂತಾದವರು ಉಪಸ್ಥಿತರಿದ್ದು, ಪಂದ್ಯಗಳನ್ನು ವೀಕ್ಷಿಸಿ, ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಿದರು.

## ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಪ್ರಧಾನ ಕಾರ್ಯದರ್ಶಿಯಾಗಿ ಸಿಂಗ್ರಿ ನೇಮಕ



❏ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಡಿ.ಕೆ. ಶಿವಕುಮಾರರವರ ಅನುಮೋದನೆ ಮೇರೆಗೆ ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷರಾದ ಆರ್.ಧರ್ಮಸೇನಾ ಅವರ ಆದೇಶ ಮೇರೆಗೆ ರಾಮಣ್ಣ ಇರಬಗೇರಾ ಅವರ ಶಿಫಾರಸ್ಸಿನ ಮೇರೆಗೆ ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ಪ್ರಧಾನ ಕಾರ್ಯದರ್ಶಿಯಾಗಿ ರಾಜಪ್ಪ ಸಿಂಗ್ರಿ ಗಬ್ಬೂರು ಇವರನ್ನ ನೇಮಕ ಮಾಡಿ ಸಣ್ಣ ನೀರಾವರಿ ಸಚಿವರಾದ ಎನ್.ಎಸ್ ಭೋಸರಾಜ ಅವರು ರಾಮಣ್ಣ ಇರಬಗೇರಾ ಹಾಗೂ ರಾಜಶೇಖರ ನಾಯಕ ಅವರು ಆದೇಶ ಪತ್ರವನ್ನು ನೀಡಿದರು.

ಇಂದಿನಿಂದ ಪಕ್ಷದ ಸಂಘಟನೆಯಲ್ಲಿ ಹಾಗೂ ಪಕ್ಷದ ಕಾರ್ಯಕ್ರಮದಲ್ಲಿ ತಾವು ಸಕ್ರಿಯವಾಗಿ ತೊಡಗಿಸಿಕೊಂಡು ತಮ್ಮ ವ್ಯಾಪ್ತಿಯಲ್ಲಿ ಬರುವ ಬೂತ್ ಮಟ್ಟದ ಮತ್ತು ಸ್ಥಳೀಯ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ನೂತನ ಜವಾಬ್ದಾರಿಯಂತೆ ತಕ್ಷಣವೇ ಕಾರ್ಯ ಪ್ರವೃತ್ತರಾಗಾಗಿ ಪಕ್ಷವನ್ನು ಪರಿಶಿಷ್ಟ ಜಾತಿ ವಿಭಾಗದ ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ತಾವು ಕಾರ್ಯೋನ್ಮುಖರಾಗಬೇಕೆಂದು ಸೂಚಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಂಬರ್ ಪ್ಲೇಟ್ ಇಲ್ಲದ ಅಕ್ರಮ ಮರಳು ಸಾಗಣೆ ಮಾಡಿದ ಟಿಪ್ಪರಗಳು ವಶಕ್ಕೆ

❏ ನೈಜ್ಯ ದೆಸೆ ನ್ಯೂಸ್

ತುರ್ವಿಹಾಳ: ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಂಬರ್ ಪ್ಲೇಟ್ ಇಲ್ಲದೆ ಮರಳು ಅಕ್ರಮವಾಗಿ ಸಾಗಿಸುತ್ತಿದ್ದ ಮೂರು ಟಿಪ್ಪರ್ ಲಾರಿಗಳನ್ನು ಪೊಲೀಸರು ವಶಕ್ಕೆ ಪಡೆದು ಸೋಮವಾರ ಪ್ರಕರಣ ದಾಖಲಿಸಿಕೊಂಡಿದ್ದಾರೆ.




ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ನವಲಿ ಗ್ರಾಮದಿಂದ ಉಮಲೂಟಿ ಮೂಲಕ ಮರಳನ್ನು ಅಕ್ರಮವಾಗಿ ಸಾಗಣೆ ಮಾಡುತ್ತಿರುವ ಖಚಿತ ಮಾಹಿತಿಯ ಮೇರೆಗೆ ತುರ್ವಿಹಾಳ ಪೊಲೀಸರು ದಾಳಿ ನಡೆಸಿದ್ದಾರೆ. ಚಾಲಕರು ಲಾರಿಗಳನ್ನು ಸ್ಥಳದಲ್ಲೇ ಬಿಟ್ಟು ಪರಾರಿಯಾಗಿದ್ದಾರೆ. ಈ ಟಿಪ್ಪರ್ ಲಾರಿಗಳು ಸೋಮಲಿಂಗ, ರಜಾಕ್, ಅನಿಲಕುಮಾರ ಎನ್ನುವವರಿಗೆ ಸೇರಿವೆ ಎಂದು ತಿಳಿದು ಬಂದಿದೆ.

## ಬಾಗೇಪಲ್ಲಿ ತಾಲ್ಲೂಕಿನ 24 ಕೆರೆಗಳಿಗೆ ನೀರು ಹರಿಸುವ ಮಹತ್ವದ ಯೋಜನೆಗೆ ಸಚಿವ ಎನ್‌ಎಸ್ ಬೋಸರಾಜ್ ಚಾಲನೆ

❏ ನೈಜ್ಯ ದೆಸೆ ನ್ಯೂಸ್





ಹೆಚ್ ಎನ್. ವ್ಯಾಲಿ ಯೋಜನೆಯ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಎರಡನೇ ಹಂತದಲ್ಲಿ 70 ಕೋಟಿ ವೆಚ್ಚದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನ 24 ಕೆರೆಗಳಿಗೆ ನೀರು ಹರಿಸುವ ಮಹತ್ವದ ಯೋಜನೆಯನ್ನು ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎಂ.ಸಿ. ಸುಧಾಕರ್ ಅವರೊಂದಿಗೆ ಬಾಗೇಪಲ್ಲಿ ತಾಲೂಕಿನ ಆಚೆಪಲ್ಲಿ ಕೆರೆಯ ಅಂಗಳದಲ್ಲಿ ನಡೆದ ಸಮಾರಂಭದಲ್ಲಿ ಇಂದು ಲೋಕಾರ್ಪಣೆಗೊಳಿಸಿದ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಪರಿಷತ್ತಿನ ಸಭಾ ನಾಯಕರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎನ್ ಎಸ್ ಬೋಸರಾಜು ಜೀ ಅವರು.

ನದಿ, ಸಮುದ್ರ ನೆರವಿಲ್ಲದೆ, ಮಳೆಯನ್ನೇ ಆಶ್ರಯಿಸಿರುವ ಬಯಲುಸೀಮೆಯ ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರುಗಳಲ್ಲಿ ಪರಿಸರ ಸ್ನೇಹಿ ಹೆಚ್ ಎನ್. ವ್ಯಾಲಿ ಯೋಜನೆ ಮೂಲಕ ಬೆಂಗಳೂರಿನ ಸಂಸ್ಕರಿಸಿದ ತ್ಯಾಜ್ಯನೀರನ್ನು 275ಕ್ಕೂ ಹೆಚ್ಚು ಕೆರೆಗಳಿಗೆ ಹರಿಸಿರುವುದರಿಂದ, ಆ ಪ್ರದೇಶಗಳಲ್ಲಿ ಅಂತರ್ಜಲ ಅಭಿವೃದ್ಧಿಗೊಂಡಿದೆ. ಇದರ ಮುಂದುವರಿದ ಭಾಗವಾಗಿ, ನಮ್ಮ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯು ಹೆಚ್ ಎನ್ ವ್ಯಾಲಿ ಮೊದಲ ಹಂತದಲ್ಲಿ ಚಿಕ್ಕಬಳ್ಳಾಪುರ ನಗರಕ್ಕೆ ಹೊಂದಿಕೊಂಡಿರುವ ಕಂದವಾರ ಕೆರೆಯಲ್ಲಿ ಕ್ರೂಢೀಕರಣಗೊಳ್ಳುತ್ತಿರುವ ಸುಮಾರು 90ಎಂಎಲ್‌ಡಿ ನೀರಿನ ಪೈಕಿ 38.50 ಎಂಎಲ್ ಡಿ ನೀರನ್ನು ಬಾಗೇಪಲ್ಲಿ ತಾಲ್ಲೂಕಿನ 24 ಕೆರೆಗಳಿಗೆ ನೀರು ಹರಿಸುವ ಮಹತ್ವದ ಯೋಜನೆ ಇದಾಗಿದೆ.

ಈ ಯೋಜನೆಯಿಂದ ಬಾಗೇಪಲ್ಲಿ ಸುತ್ತಮುತ್ತಲ 1,500 ಅಡಿಗೂ ಹೆಚ್ಚು ಪಾತಾಳಕ್ಕೆ ಇಳಿದಿರುವ ಅಂತರ್ಜಲವು ಅಭಿವೃದ್ಧಿಗೊಂಡು ಅನ್ನದಾತರ ಕೃಷಿ ಚಟುವಟಿಕೆಗಳಿಗೆ ಪ್ರೋತ್ಸಾಹ ದೊರೆಯಲಿದೆ. ಕೆರೆಯಲ್ಲಿ ಮೀನುಗಾರಿಕೆ ಆರಂಭಗೊಳ್ಳುವುದರಿಂದ ರೈತರ ಆದಾಯ ಹೆಚ್ಚಲಿದೆ. ಸಮಾರಂಭದಲ್ಲಿ, ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ಎಸ್. ಎನ್ ಸುಬ್ಬಾರೆಡ್ಡಿ ಹಾಗೂ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## ಸೌದಿ ಅರೇಬಿಯಾದ ಬಸ್ ಅಪಘಾತದಲ್ಲಿ ಬೀದರ್ ಮಹಿಳೆ ರಹಮತ್ ಬಿ ಸಾವು

❏ ನೈಜ್ಯ ದೆಸೆ ನ್ಯೂಸ್

ಸೌದಿ ಅರೇಬಿಯಾದಲ್ಲಿ ಸಂಭವಿಸಿದ ಬಸ್ ಅಪಘಾತದಲ್ಲಿ ಬೀದರ್ ಮೂಲದ ಮಹಿಳೆ ಸಾವನ್ನಪ್ಪಿದ್ದಾರೆ. ಮೃತ ಮಹಿಳೆ ರಹಮತ್ ಬಿ (80) ಮನೆಯಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ. ನವಂಬರ್ 9 ರಂದು ಮೆಕ್ಕಾಗೆ ತೆರಳಲು, ಬೀದರ್‌ನಿಂದ ಹೈದ್ರಾಬಾದ್‌ಗೆ ಮೃತ ಮಹಿಳೆ ರೆಹಮತ್ ಬಿ ತೆರಳಿದ್ದರು.



ಹೈದ್ರಾಬಾದ್‌ನಲ್ಲಿರುವ ಸಂಬಂಧಿ ಜೊತೆಗೆ ರೆಹಮತ್ ಬಿ ಮೆಕ್ಕಾಗೆ ತೆರಳಿದ್ದರು. ಹೈದ್ರಾಬಾದ್‌ನಿಂದ ಸೌದಿ ಅರೇಬಿಯಾಗೆ ವಿಮಾನದಲ್ಲಿ ತೆರಳಿದ್ದರು. ಮೆಕ್ಕಾದಲ್ಲಿ 8 ದಿನ ಕಳೆದು ಮದಿನಾಗೆ ಬಸ್‌ನಲ್ಲಿ ತೆರಳುವ ವೇಳೆ ದುರಂತ ಸಂಭವಿಸಿದೆ. ಮದಿನಾದಿಂದ 25 ಕಿ.ಮೀ. ದೂರದಲ್ಲಿ ಸೋಮವಾರ ಸಂಭವಿಸಿದ್ದ ಭೀಕರ ಬಸ್ ಅಪಘಾತದಲ್ಲಿ ಭಾರತದ 42 ಮಂದಿ ಸಾವನ್ನಪ್ಪಿದ್ದಾರೆ. 42 ಮಂದಿಯ ಪೈಕಿ ಬೀದರ್‌ನ ರೆಹಮತ್ ಬಿ ಕೂಡ ಒಬ್ಬರು.

## ಮಾನ್ವಿ ಪಟ್ಟಣದ ಜೆಡಿಎಸ್ ಪಕ್ಷದ ಕಾರ್ಯಾಲಯದಲ್ಲಿ ನೂತನವಾಗಿ ಆಯ್ಕೆಯಾದ ಜಿಲ್ಲಾ ತಾಲೂಕು ಮಟ್ಟದ ಪದಾಧಿಕಾರಿಗಳಿಗೆ ಸನ್ಮಾನ ಕಾರ್ಯಕ್ರಮ

❏ ನೈಜ್ಯ ದೆಸೆ ನ್ಯೂಸ್



ಮಾನ್ವಿ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯದರ್ಶಿಗಳಾಗಿ ಆಯ್ಕೆಯಾದ ಬಸವರಾಜ್ ಭೋಗವತಿ, ಕಾರ್ಯಕಾರಿ ಸಮಿತಿ ಸದಸ್ಯರಾಗಿ ಆಯ್ಕೆಯಾದ ತಾಯಪ್ಪ ಬಿ. ಹೊಸೂರು, ಮಾನ್ವಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಶರಣಬಸವ ನೀರಮಾನ್ವಿ, ಹಾಗೂ ಸಂಕಲ್ಪ ವಿಕಲಚೇತನರ ಒಕ್ಕೂಟದ ಹೊಸ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಶಿವಕುಮಾರ್ ಚಲ್ಮಲ್ ರವರಿಗೆ ಸನ್ಮಾನಿಸಿ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಲಾಯಿತು.

ನಂತರ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಮಾತನಾಡಿ, "ನೂತನವಾಗಿ ಆಯ್ಕೆಯಾದ ಈ ನಾಲ್ವರು ಪದಾಧಿಕಾರಿಗಳು ತಮ್ಮ ತಮ್ಮ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವೆ, ನೈತಿಕತೆ ಮತ್ತು ಜವಾಬ್ದಾರಿಯೊಂದಿಗೆ ಕೆಲಸ ಮಾಡುವುದು ನಮ್ಮ ಮಾನ್ವಿ ತಾಲೂಕಿನ ಹೆಮ್ಮೆಯ ವಿಷಯ. ಪತ್ರಕರ್ತರ ಕ್ಷೇತ್ರವಾಗಲಿ, ಸಾಹಿತ್ಯ ಸೇವೆಯಾಗಲಿ, ವಿಕಲಚೇತನರ ಹಕ್ಕುಗಳ ಹೋರಾಟವಾಗಲಿ?ಇವರು ನೀಡಿರುವ ಕೊಡುಗೆ ಶ್ಲಾಘನೀಯ. ಹೊಸ ಜವಾಬ್ದಾರಿಗಳು ಇವರಿಗೆ ಮತ್ತಷ್ಟು ಶಕ್ತಿ ನೀಡಲಿ. ಸಮಾಜದ ಒಳಿತಿಗಾಗಿ, ದುರ್ಬಲ ವರ್ಗಗಳ ಧ್ವನಿಯಾಗಲು ಹಾಗೂ ಆಡಳಿತಕ್ಕೆ ನಿಜವಾದ ಸಮಸ್ಯೆಗಳನ್ನು ತಲುಪಿಸಲು ಇವರು ಮುಂದುವರಿಯಲಿ," ಎಂದು ಶುಭ ಹಾರೈಸಿದರು.

ಬಸವರಾಜ್ ಭೋಗವತಿ ಮತ್ತು ತಾಯಪ್ಪ ಬಿ. ಹೊಸೂರು ಇವರಿಬ್ಬರೂ ದೀರ್ಘಕಾಲ ಪತ್ರಕರ್ತರ ಕ್ಷೇತ್ರದಲ್ಲಿ ನಿಜಸ್ಥಿತಿ ಅನಾವರಣ, ಸಾರ್ವಜನಿಕ ಹಿತಾಸಕ್ತಿ ಮತ್ತು ಸಮಾಜಮುಖಿ ಕಾರ್ಯಗಳಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದಾರೆ. ಹೊಸ ಜವಾಬ್ದಾರಿಗಳು ಇವರ ಸೇವೆಯನ್ನು ಇನ್ನಷ್ಟು ಬಲಗೊಳಿಸಲೆಂದು ಅಭಿಪ್ರಾಯ ವ್ಯಕ್ತವಾಯಿತು. ಶರಣಬಸವ ನೀರಮಾನ್ವಿ ಕನ್ನಡ ಸಾಹಿತ್ಯ ಪರಿಷತ್ತಿನ ಹೊಸ ಅಧ್ಯಕ್ಷರಾಗಿ ಅವರು ಮಾನ್ವಿ ತಾಲೂಕಿನ ಸಾಹಿತ್ಯ ಚಟುವಟಿಕೆಗಳಿಗೆ ಹೊಸ ಉತ್ಸಾಹ ತುಂಬಲಿದ್ದಾರೆ ಎಂಬ ವಿಶ್ವಾಸ ಹಂಚಿಕೊಳ್ಳಲಾಯಿತು.

ಶಿವಕುಮಾರ್ ಚಲ್ಮಲ್?ವಿಕಲಚೇತನರ ಹಕ್ಕುಗಳ ಹೋರಾಟ, ಕಲ್ಯಾಣ ಕಾರ್ಯಗಳು ಮತ್ತು ಸಂಘಟನೆಯ ಬಲವರ್ಧನದಲ್ಲಿ ನಿರಂತರವಾಗಿ ತೊಡಗಿಸಿಕೊಂಡು ವಿಕಲಚೇತನರ ಸಮಸ್ಯೆಗಳ ಪರಿಹಾರಕ್ಕಾಗಿ ಸಕ್ರಿಯವಾಗಿ ಕೆಲಸ ಮಾಡುವರು ಎಂಬ ನಂಬಿಕೆ ವ್ಯಕ್ತವಾಯಿತು. ಅಂತಿಮವಾಗಿ, ನಾಲ್ವರು ಪದಾಧಿಕಾರಿಗಳಿಗೂ ಮುಂದಿನ ಜವಾಬ್ದಾರಿಗಳಲ್ಲಿ ಯಶಸ್ಸು ದೊರಕಿ, ತಮ್ಮ ಕ್ಷೇತ್ರಗಳಲ್ಲಿ ಆದರ್ಶ ಸೇವೆ ಸಲ್ಲಿಸಲಿ ಎಂದು ಹಾರೈಸಿ ಸನ್ಮಾನಿಸಲಾಯಿತು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಯುನಾನಿ ಕೋರ್ಸ್ BUMS (Bachelor of Unani Medicine and Surgery)

ಯುನಾನಿ ವೈದ್ಯಕೀಯ ಕೋರ್ಸ್, ಮುಖ್ಯವಾಗಿ ಪದವಿ ಕೋರ್ಸ್ಗಳನ್ನು ಒಳಗೊಂಡಿವೆ. ಯುನಾನಿ ಔಷಧವು ಗ್ರೀಕ್ ವೈದ್ಯರಾದ ಹಿಪ್ಪೊಕ್ರೇಟ್ಸ್ ಮತ್ತು ಗ್ಯಾಲೆನ್ ಅವರ ತತ್ತ್ವಗಳನ್ನು ಆಧರಿಸಿದೆ ಮತ್ತು ಇದು ಭಾರತದಲ್ಲಿ ಒಂದು ಪ್ರಮುಖ ಸಾಂಪ್ರದಾಯಿಕ ಔಷಧ ಪದ್ಧತಿಯಾಗಿದೆ. ಕೋರ್ಸ್ನ ಅವಧಿ ಸುಮಾರು 66 ತಿಂಗಳುಗಳು (5.5 ವರ್ಷಗಳು) , ಇದರಲ್ಲಿ ಒಂದು ವರ್ಷದ ಕಡ್ಡಾಯ ಇಂಟರ್ನ್ಶಿಪ್ ಕೂಡ ಸೇರಿದೆ. ಭಾರತದ ಒಟ್ಟು 59 ಯುನಾನಿ ಕಾಲೇಜಗಳು ಕರ್ನಾಟಕದಲ್ಲಿ 04 ಯುನಾನಿ ಮೆಡಿಕಲ್ ಕಾಲೇಜುಗಳಿವೆ. ಪ್ರವೇಶ ಅರ್ಹತೆ: ಅಭ್ಯರ್ಥಿಯು ಪಿಯುಸಿ / 12ನೇ ತರಗತಿಯಲ್ಲಿ ವಿಜ್ಞಾನ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು., ನೀಟ್ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ಯುನಾನಿ ಔಷಧಶಾಸ್ತ್ರ, ಹಿಜಾಮಾ, ಡೈಟ್ ಥೆರಪಿ, ನೈಸರ್ಗಿಕ ಚಿಕಿತ್ಸೆ ಇತ್ಯಾದಿ ಆಧುನಿಕ ವಿಷಯಗಳು ಯುನಾನಿ ನಂತರ ವಿದ್ಯಾರ್ಥಿಗಳು ಈ ಕ್ಷೇತ್ರಗಳಲ್ಲಿ ಕೆಲಸ ಮಾಡಬಹುದು: ಯುನಾನಿ ವೈದ್ಯ , ಆಸ್ಪತ್ರೆ, ಆರೋಗ್ಯ ಕೇಂದ್ರ, ಕ್ಲಿನಿಕ್ ಸ್ಥಾಪನೆ, ಔಷಧ ತಯಾರಿಕಾ ಕಂಪನಿ, ಉಪನ್ಯಾಸಕರು / ಸಂಶೋಧನಾ ವೃತ್ತಿ, ಉನ್ನತ ಶಿಕ್ಷಣ ಎಂ.ಡಿ /ಎಂ ಎಸ್ ಮಾಡಲು ಅವಕಾಶ ಹಾಗೂ ಐ ಎ ಎಸ್ , ಕೆ ಎ ಎಸ್ ಸ್ಪರ್ದಾತ್ಮಕ ಪರೀಕ್ಷೆ

## ಪಕ್ಷದ ಹಿರಿಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಮುಂದಾದ

# ಬಿ.ವೈ.ವಿಜಯೇಂದ್ರ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಬಿಹಾರ ವಿಧಾನಸಭೆ ಚುನಾವಣೆ ಫಲಿತಾಂಶದಿಂದ ಪುಳಕಿತರಾಗಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪಕ್ಷದ ಹಿರಿಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪುನಃ ಮತ್ತೊಂದು ಅವಧಿಗೆ ಮುಂದುವರೆಯುವ ಉಮೇದಿನಲ್ಲಿದ್ದಾರೆ.**

ಕರ್ನಾಟಕ ಮತ್ತು ಉತ್ತರಪ್ರದೇಶಗಳಲ್ಲಿ ಮಾತ್ರ ರಾಜ್ಯಾಧ್ಯಕ್ಷರ ಸ್ಥಾನ ಖಾಲಿ ಇದ್ದು ಯಾವುದೇ ಸಂದರ್ಭದಲ್ಲಿ ಈ ಎರಡೂ ರಾಜ್ಯಗಳಿಗೆ ಆಯ್ಕೆಯಾಗುವ ಸಂಭವವಿದೆ. ದೆಹಲಿ ನಾಯಕರು ಅಳೆದುತೂಗಿ ಬಾಕಿ ಇರುವ ರಾಜ್ಯಗಳಿಗೆ ಘೋಷಣೆ ಮಾಡುವ ನಿರೀಕ್ಷೆ ಇದೆ ಎಂದು ತಿಳಿದುಬಂದಿದೆ. ವಿಳಂಬ ಮಾಡಿದಷ್ಟು ಸಂಘಟನೆಗೆ ಹಿನ್ನಡೆ ಮತ್ತು ಪಕ್ಷದಲ್ಲಿ ಬಣಗಳು ಸೃಷ್ಟಿಯಾಗುತ್ತದೆ ಎಂಬುದನ್ನು ಅರಿತಿರುವ ವರಿಷ್ಠರು ಆದಷ್ಟು ಶೀಘ್ರ ನೆನೆಗುದಿಗೆ ಬಿದ್ದಿರುವ ಕರ್ನಾಟಕಕ್ಕೆ ಪೂರ್ಣಾವಧಿ ಅಧ್ಯಕ್ಷರನ್ನು ನೇಮಕ ಮಾಡಲು ಒಲವು ತೋರಿದೆ. ಬಿ.ವೈ.ವಿಜಯೇಂದ್ರ ರಾಜ್ಯಾಧ್ಯಕ್ಷರಾಗಿ ಎರಡು ವರ್ಷ ಪೂರ್ಣಗೊಳಿಸಿರುವ ಸಂದರ್ಭದಲ್ಲಿ ಮುಂದಿನ ಮೂರು ವರ್ಷಗಳಿಗೆ ಪೂರ್ಣಾವಧಿ ಅಧ್ಯಕ್ಷರಾಗಿ ಆಯ್ಕೆ ಮಾಡಲು ವ-



ರಿಷ್ಠರಲ್ಲಿ ಚಿಂತನ-ಮಂಥನ ನಡೆಸಲಾಗಿದೆ. ಒಂದು ಬಣ ಇದಕ್ಕೆ ವಿರೋಧ ವ್ಯಕ್ತಪಡಿಸಿದರೂ ಅದಕ್ಕೆ ಹೆಚ್ಚು ತಲೆಕೆಡಿಸಿಕೊಳ್ಳದೆ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ರಾಜ್ಯದಲ್ಲಿ ಪಕ್ಷವನ್ನು ಬಲಪಡಿಸಲು ವಿಜಯೇಂದ್ರಗೆ ಪಕ್ಷದ ಸಾರಥ್ಯವನ್ನು ನೀಡಲು ಗಂಭೀರ ಚಿಂತನೆ ನಡೆದಿದೆ ಎಂದು ಗೊತ್ತಾಗಿದೆ. ಇದರ ಸುಳಿವು ಅರಿತಿರುವ ವಿಜಯೇಂದ್ರ ತಮನ್ನು ಮತ್ತೊಂದು ಅವಧಿಗೆ ಅಧ್ಯಕ್ಷರಾಗಿ ಮುಂದುವರೆಸಬಹುದೆಂಬ ಕಾರಣ-ಕ್ಕಾಗಿಯೇ ಪಕ್ಷದಲ್ಲಿರುವ ಹಿರಿಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುನ್ನಡೆಯಲು ಮುಂದಾಗುತ್ತಿದ್ದಾರೆ.


ಇದರ ಮೊದಲ ಭಾಗವಾಗಿ ಕೇಂದ್ರದ ಮಾಜಿ ಸಚಿವ ಡಿ.ವಿ.ಸದಾನಂದಗೌಡ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿ ಪಕ್ಷ ಸಂಘಟನೆ ಕುರಿತಂತೆ ಸಲಹೆಸೂಚನೆ, ಮಾರ್ಗದರ್ಶನವನ್ನು ಪಡೆದುಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಹಿರಿಯರಾಗಿರುವ ರಾಮಚಂದ್ರೇಗೌಡ, ಡಿ.ಎಚ್.ಶಂಕರಮೂರ್ತಿ ಸೇರಿದಂತೆ ರಾಜ್ಯದಲ್ಲಿ ಬಿಜೆಪಿ ಕಟ್ಟಿ ಬೆಳೆಸಿದವರಲ್ಲಿ ಪ್ರಮುಖ ಪಾತ್ರ ವಹಿಸಿದ ಹಿರಿಯರನ್ನು ಭೇಟಿಯಾಗಿ ಆಶೀರ್ವಾದ ಪಡೆದುಕೊಳ್ಳಲಿದ್ದಾರೆ ಎಂದು ತಿಳಿದುಬಂದಿದೆ. ಇದಲ್ಲದೆ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಯಲ್ಲಿ ಬೇರೆ ಬೇರೆ ಕಾರಣಗಳಿಂದ ಟಿಕೆಟ್ ಸಿಗದೆ ಅವಕಾಶ ವಂಚಿತರನ್ನು ಸಹ ಭೇಟಿ ಮಾಡಿ ಪಕ್ಷಕ್ಕೆ ಅಗತ್ಯ ಸಲಹೆ, ಮಾರ್ಗದರ್ಶನ ಸೂಚನೆಗಳನ್ನು ನೀಡುವಂತೆಯೂ ಕೋರಲಿದ್ದಾರೆ ಎಂದು ಗೊತ್ತಾಗಿದೆ.

ರಾಜ್ಯಾಧ್ಯಕ್ಷರನ್ನು ನೇಮಕ ಮಾಡುವಾಗ ಸಾಮಾನ್ಯವಾಗಿ ವರಿಷ್ಠರು ಸದ್ದಿಲ್ಲದೆ ಆಯಾ ರಾಜ್ಯಗಳ ಆರ್ಎಸ್ಎಸ್ ನಾಯಕರು, ಹಿರಿಯರು ಮತ್ತು ಮಾರ್ಗದರ್ಶಕ ಮಂಡಳಿಯ ಸದಸ್ಯ-ರಿಂದ ಅಭಿಪ್ರಾಯವನ್ನು ಸಂಗ್ರಹಿಸಿಯೇ ನಂತರ ಸೂಕ್ತವಾದ ನಿರ್ಧಾರವನ್ನು ತೆಗೆದುಕೊಳ್ಳುತ್ತಾರೆ. ಕರ್ನಾಟಕಕ್ಕೆ ಅಧ್ಯಕ್ಷರ ನೇಮಕಾತಿ ಘೋಷಣೆಯಾಗುವ ಸಮಯ ಹತ್ತಿರವಾಗುತ್ತಿರುವುದರಿಂದ ವಿಜಯೇಂದ್ರ ಹಿರಿಯರ ಸಲಹೆ ಪಡೆದು ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡೇ ಪಕ್ಷ ಮುನ್ನಡೆಸುವ ಆಲೋಚನೆಯಲ್ಲಿದ್ದಾರೆ.

## ಚಿಕ್ಕೋಡಿ ಲೋಕಸಭಾ ಸಂಸದೆ ಪ್ರಿಯಾಂಕಾ ಸತೀಶ್ ಜಾರಕಿಹೊಳಿ ಅವರಿಗೆ ಸತೀಶ್ ಜಾರಕಿಹೊಳಿ ಅಭಿಮಾನಿ ಬಳಗದಿಂದ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಲಿಂಗಸ್ಗೂರು ಪಟ್ಟಣಕ್ಕೆ ಖಾಸಗಿ ಕಾರ್ಯಕ್ರಮದ ನಿಮಿತ್ಯ ಮಂಗಳವಾರ ಆಗಮಿಸಿದ್ದ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಸಂಸದೆ ಪ್ರಿಯಾಂಕಾ ಸತೀಶ್ ಜಾರಕಿಹೊಳಿ ಅವರಿಗೆ ಸತೀಶ್ ಜಾರಕಿಹೊಳಿ ಅಭಿಮಾನಿಗಳು ಸನ್ಮಾನಿಸಿ ಗೌರವಿಸಿದರು.**



ಕಾಂಗ್ರೆಸ್ ಮುಖಂಡರಾದ ರವಿ ಪಾಟೀಲ್ ರಾಯಚೂರು ಈ ಸಂದರ್ಭದಲ್ಲಿ ಸೋಮನಗೌಡ ಪಾಟೀಲ್, ದಲಿತ ಮುಖಂಡ ಹಾಜಪ್ಪ , ಮಂಜುನಾಥ್ ಪಾಟೀಲ್ ವಕೀಲರು, ಅಯ್ಯಪ್ಪ, ಪತ್ರಕರ್ತರಾದ ಇಂದರಪಾಶ ಚಿಂಚರಕಿ, ಮೌನೇಶ್

## ನಕಲಿ ಪ್ರಮಾಣ ಪತ್ರ ವಿತರಣೆ ಕೇಸ್: 6 ಕಡೆ ಲೋಕಾಯುಕ್ತ ದಾಳಿ

❑ ನೈಜ್ಯ ದೆಸೆ ನ್ಯೂಸ್

**ಕೋಲಾರ: ಕೃಷಿ ಜಮೀನಿನ ಹೆಸರಲ್ಲಿ ಬೋನಾಫೈಡ್ ನಕಲಿ ಪ್ರಮಾಣ ಪತ್ರ ವಿತರಣೆ ಹಾಗೂ ಟ್ರ್ಯಾಕ್ಟರ್ ನೋಂದಣಿ ಪ್ರಕರಣ ಸಂಬಂಧ ಕೋಲಾರದ 6 ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಕೋಲಾರದ ಐದು ಕಡೆ ಹಾಗೂ ಚಿಂತಾಮಣಿಯಲ್ಲಿ ಒಂದುಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದು, ಪರಿಶೀಲನೆ ನಡೆಸಲಾಗುತಿದೆ.**




ಸಂಬಂಧವಿಲ್ಲದ ಮಾಲೀಕರ ಕೃಷಿ ಜಮೀನಿನ ಹೆಸರಲ್ಲಿ ಸುಮಾರು 1,387 ನಕಲಿ ಬೋನಾಫೈಡ್ ದಾಖಲೆ ಸೃಷ್ಟಿಸಿ ಸರ್ಕಾರದ ಬೊಕ್ಕಸಕ್ಕೆ ಸುಮಾರು 2 ಕೋಟಿ ನಷ್ಟ ಮಾಡಿದ್ದಾರೆ ಎಂದು ಲೋಕಾಯುಕ್ತದಲ್ಲಿ ಪ್ರಕರಣ ದಾಖಲಾಗಿತ್ತು. ನರಸಾಪುರ ನಾಡಕಚೇರಿ ಉಪ ತಹಶಿಲ್ದಾರ್ ನಾರಾಯಣಸ್ವಾಮಿ, ಹೊರಗುತ್ತಿಗೆ ಆಪರೇಟರ್ ಅಂಬುಜಾ, ಮಧ್ಯವರ್ತಿ ಮಂಜುನಾಥ್, ಚಿಂತಾಮಣಿಯ ಸಾಯಿ ಆದಿತ್ಯ ಟ್ರಾ ್ಯಕ್ಟರ್ ಷೋರೂಂ ಸೇಲ್ಸ್ ಮ್ಯಾನ್ ಗೋಕುಲ ರೆಡ್ಡಿ, ವ್ಯವಸ್ಥಾಪಕ ಆಂಜನೇಯ ರೆಡ್ಡಿ, ಆರ್ ಟಿಒ ಮಧ್ಯವರ್ತಿ ಅಶ್ವತ್ಥನಾರಾಯಣ ಅವರ ಮನೆಗಳ ಮೇಲೆ ದಾಳಿ ನಡೆದಿದೆ.

## ಸ ಪ್ರೌ ಶಾಲೆ ಆರ್ ಎಚ್ ನಂ 1 ವಿದ್ಯಾರ್ಥಿನಿಯರ 17 ವರ್ಷದ ಒಳಗಿನ ಹರ್ಡಲ್ಸ್ ಸ್ಪರ್ಧೆಯಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ







❑ ನೈಜ್ಯ ದೆಸೆ ನ್ಯೂಸ್

**17 ವರ್ಷದ ಒಳಗಿನ ಬಾಲಕಿಯರ 400 ಮೀ ಓಟದ ಸ್ಪರ್ಧೆ ಯಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾದ ಕು. ಸುಧಾ , ರಾಯಚೂರು ಜಿಲ್ಲಾ ಮಟ್ಟದ ಬಾಲಕಿಯರ 100 ಮೀ ಓಟದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾದ ಕು. ಮಮತಾ. 17 ವರ್ಷದ ಒಳಗಿನ 110 ಹರ್ಡಲ್ಸ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾದ ಕು.ಅಕ್ಷತಾ, ಬಾಲಕಿಯರ 4*400 ಓಟದಲ್ಲಿ ದ್ವಿತೀಯ ಸ್ಥಾನ ಪಡೆದ ಸ ಪ್ರೌ ಶಾಲೆ ಆರ್ ಎಚ್ ನಂ 1 ಮತ್ತು ಬಾಲಕಿಯರ 4*100 ದ್ವಿತೀಯ ಸ್ಥಾನ ಪಡೆದ ಸ ಪ್ರೌ ಶಾಲೆ ಆರ್ ಎಚ್ ನಂ 1 ವಿದ್ಯಾರ್ಥಿಗಳಿಗೆ ಆರ್ ಎಚ್ ನಂ 1 ಸ ಪ್ರೌ ಶಾಲೆಯ ಮುಖ್ಯ ಗುರುಗಳು ಶುಭಾಶಯ ಕೋರಿ ಪ್ರಶಂಸೆ ವ್ಯಕ್ತ ಪಡಿಸಿದರು.**

ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರು ಮತ್ತು ಸದಸ್ಯರುಗಳು ನಮ್ಮ ಶಾಲೆಯ ವಿದ್ಯಾರ್ಥಿನಿಯರು ಸಾಧನೆ ಮಾಡಿರುವುದು ನಮ್ಮ ಗ್ರಾಮಕ್ಕೆ ಕೀರ್ತಿ ತಂದಿರುತ್ತದೆ ಎಂದು ಹರ್ಷ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ರಹಮತ್ ಪಾಷಾ ನಮ್ಮ ಪ್ರೌಢಶಾಲೆ ವಿದ್ಯಾರ್ಥಿನಿಯರ ಸಾಧನೆ ನಮ್ಮ ಗ್ರಾಮ ಪಂಚಾಯಿತಿ ಮಟ್ಟದ ಕ್ರೀಡಾಪಟುಗಳಿಗೆ ಸ್ಪೂರ್ತಿದಾಯಕ ಮತ್ತು ರಾಜ್ಯಮಟ್ಟದಲ್ಲಿ ಜಯಗಳಿಸಿ ನಮ್ಮ ಗ್ರಾಮದ ಕೀರ್ತಿ ಪಟಾಕೆ ಹರಿಸಲೆಂದೇ ಶುಭಕೋರಿದರು ಮತ್ತು ಆರ್ ಎಚ್ ನಂ 1 ಗ್ರಾಮಸ್ಥರು ಮತ್ತು ಕ್ರೀಡಾಭಿಮಾನಿಗಳು ಶುಭಾಶಯ ಕೋರಿದರು.

## ಶರಬಣ್ಣ ಪಾಟೀಲ್, ಸೈಯದ್ ಸಾಬ ಮನ್ಸಲಾಪೂರ ಅವರಿಗೆ ಸಹಕಾರ ರತ್ನ ಪ್ರಶಸ್ತಿ: ಗಣ್ಯರಿಂದ ಗೌರವ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ನವೆಂಬರ್ 18 (ಕ.ವಾ.): ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ನಿರ್ದೇಶಕರಾದ ಶರಬಣ್ಣ ಪಾಟೀಲ್ ಹಾಗೂ ಮೈಸೂರಿನ ಕರ್ನಾಟಕ ರಾಜ್ಯ ಮೀನುಗಾರರ ಸಹಕಾರ ಮಹಾಮಂಡಲ ಸೈಯದ್ ಸಾಬ ಮನ್ಸಲಾಪೂರು ಅವ-ರಿಗೆ ಸಹಕಾರ ರತ್ನ ಪ್ರಶಸ್ತಿ ಲಭಿಸಿದೆ.**



ಕರ್ನಾಟಕ ರಾಜ್ಯ ಸಹಕಾರ ಚಳುವಳಿಯ ಬೆಳವಣಿಗೆಗೆ ಇವರು ಸಲ್ಲಿಸಿರುವ ಅವಿರತ ಸೇವೆಗಾಗಿ ಈ ಪುರಸ್ಕಾರ ಲಭಿಸಿದೆ. ಬೆಂಗಳೂರಿನ ಗಾಯಿತ್ರಿ ವಿಹಾರ್ ಮೇಕ್ರಿ ಸರ್ಕಲ್ ಬಳಿಯಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಸಹಕಾರ ಇಲಾಖೆಯ ಪ್ರತಿಷ್ಠಿತ ಸಹಕಾರ ರತ್ನ ಪ್ರಶಸ್ತಿ ನೀಡಿ ಅಭಿನಂದಿಸಿದರು. ಅದೇ ರೀತಿ, ರಾಯಚೂ-ರಿನ ಕೃಷಿ ವಿಶ್ವವಿದ್ಯಾಲಯದಲ್ಲಿ ಇತ್ತೀಚೆಗೆ ಜರುಗಿದೆ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಸಹ ಶರಬಣ್ಣ ಪಾಟೀಲ್ ಹಾಗೂ ಸೈಯದ್ ಸಾಬ ಇವ-ರಿಗೆ ಸಚಿವರಾದ ಎನ್.ಎಸ್. ಭೋಸರಾಜು, ಶಾಸಕರಾದ ಶಿವರಾಜ್ ಪಾಟೀಲ್, ಬಸನಗೌಡ ದದ್ದಲ್, ಎ.ವಸಂತಕುಮಾರ್ ಹಾಗೂ ಇನ್ನಿತರರು ಸನ್ಮಾನಿಸಿದರು.

ನವೆಂಬರ್ 18ರಂದು ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘ ರಾಯಚೂರಿನ ಮುಖ್ಯ ಕಚೇರಿಯಲ್ಲಿ ಸಹ ಶರಬಣ್ಣ ಪಾಟೀಲ್ ಹಾಗೂ ಸೈಯದ್ ಸಾಬ ಅವರಿಗೆ ಸಂಘದ ಅಧ್ಯಕ್ಷ ಪತಂಗೆ ಜಯವಂತರಾವ್, ಉಪಾಧ್ಯಕ್ಷ ಶಶಿಧರ ಪಾಟೀಲ್, ಮಲ್ಲನಗೌಡ ಪಾಟೀಲ್ ಇನ್ನಿತರರು ಸನ್ಮಾನಿಸಿ ಗೌರವಿಸಿದರು.

## ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಿಸಲಿ: ಶಾ.ಶಿ.ಇ ಪ್ರ.ಕಾರ್ಯದರ್ಶಿ ರಶ್ಮಿ ಮಹೇಶ್ ಸೂಚನೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕಲ್ಯಾಣ ಕರ್ನಾಟಕ ಪ್ರದೇಶದ ರಾಯಚೂರು, ಕೊಪ್ಪಳ, ವಿಜಯನಗರ, ಕಲಬುರಗಿ, ಬೀದರ ಮತ್ತು ಬಳ್ಳಾರಿ ಜಿಲ್ಲೆಗಳ ತಾಲೂಕವಾರು ಆರು ವಿಷಯಗಳ ಸಂಪನ್ಮೂಲ ಶಿಕ್ಷಕರಿಗಾಗಿ ಹಾಗೂ ಧಾರವಾಡ ವಿಭಾಗದ ಆರು ಜಿಲ್ಲೆಗಳ ವಿಷಯಗಳ ಸಂಪನ್ಮೂಲ ಶಿಕ್ಷಕರಿಗಾಗಿ ನವೆಂಬರ್ 17ರಂದು ಒಂದು ದಿನದ ತರಬೇತಿ ಕಾರ್ಯಗಾರವು ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆ ಪೂರ್ಣಿಮಾ ಇಂಟರ್ನ್ಯಾಷನಲ್ ಶಾಲೆಯಲ್ಲಿ ನವೆಂಬರ್ 17ರಂದು ನಡೆಯಿತು.**

ಶಾಲಾ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ವ್ಹಿ. ರಶ್ಮಿ ಮಹೇಶ್ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಈ ಬಾರಿ ಕಲ್ಯಾಣ ಕರ್ನಾಟಕ ಭಾಗದ ಎಸ್. ಎಸ್. ಎಲ್. ಸಿ. ಪರೀಕ್ಷೆ ಫಲಿತಾಂಶ ಸುಧಾರಣೆ ಮಾಡಲು ಎಲ್ಲ ರೀತಿಯ ಅಗತ್ಯ ಕ್ರಮವಹಿಸಬೇಕು. ಈ ಕಾರ್ಯಗಾರದ ಮುಖ್ಯ ಗುರಿ ಮತ್ತು ಉದ್ದೇಶ ಇದೆ ಆಗಿದೆ ಎಂದರು. ಫಲಿತಾಂಶ ಸುಧಾರಣೆಯ ವಿಷಯವನ್ನೇ ಈಗ ಶಿಕ್ಷಕರು ಪ್ರಥಮ ಆದ್ಯತೆ ಎಂದು ಭಾವಿಸಿ ಶಾಲಾ ಹಂತದಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ವಿದ್ಯಾರ್ಥಿಗಳಿಗಾಗಿ ಪರೀಕ್ಷಾ ಮಂಡಳಿಯು ಬಿಡುಗಡೆ ಮಾಡಿರುವ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಪರಿಚಯಿಸಬೇಕು.

ಪಠ್ಯ ಆಧಾರಿತ ಮೌಲ್ಯಮಾಪನದ ಬಗ್ಗೆ ಅರಿಯವೇಕು ಎಂದು ನಾನಾ ವಿಷಯ ತಿಳಿಸಿದರು. ಜನವರಿ ಮೊದಲ ವಾರ, ಕೊನೆಯ ವಾರ ಮತ್ತು ಫೆಬ್ರುವರಿಯಲ್ಲಿ ಪೂರ್ವ ಸಿದ್ಧತಾ ಪರೀಕ್ಷೆ ಕೈಗೊಳ್ಳಲು



ಇಲಾಖೆಯು ತೀರ್ಮಾನಿಸಿ ವೇಳಾಪಟ್ಟಿ ನೀಡಿದೆ. ಇದನ್ನು ವಿದ್ಯಾರ್ಥಿಗಳಿಗೆ, ಪಾಲಕ ಪೋಷಕರಿಗೆ ತಿಳಿಸಬೇಕು. ಈ ಭಾಗದ ಫಲಿತಾಂಶ ಸುಧಾರಣೆ ಮಾಡಬೇಕು. ಜಿಲ್ಲಾ ಹಂತದ ಮತ್ತು ತಾಲೂಕು ಹಂತದ ಅಧಿಕಾರಿಗಳು ನವೆಂಬರ್, ಡಿಸೆಂಬರ್, ಜನೆವರಿ, ಫೆಬ್ರುವರಿ ತಿಂಗಳಲ್ಲಿ ನಿರಂತರ ಫಾಲೋ ಅಪ್ ಮಾಡಿ ನೀಡಿರುವ ಚೆಕ್ ಲಿಸ್ಟ್ ಗಳ ಪ್ರಕಾರ ಫಲಿತಾಂಶಗಳನ್ನು ವಿಶ್ಲೇಷಿಸುವ ಕಾರ್ಯಪಡೆ ರಚನೆ ಮಾಡಿ ನಮಗೆ ವರದಿ ನೀಡಬೇಕು ಎಂದು ತಿಳಿಸಿದರು. ಕಲ್ಯಾಣ ಕರ್ನಾಟಕದ ಶಾಲೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಹೆಚ್ಚಾಗಿರುವುದರಿಂದ ಅವರಲ್ಲಿ ಆತ್ಮವಿಶ್ವಾಸ ವೃದ್ಧಿಸುವ ಕೆಲಸ ಮಾಡಬೇಕು.

ಶಿಕ್ಷಕರು ತಮ್ಮ ಜವಾಬ್ದಾರಿ ಅರಿತು ಕೆಲಸ ಮಾಡಬೇಕು. ಬಿಎಲ್ಒ ಕೆಲಸಗಳಿಗೆ ಪ್ರೌಢಶಾಲೆಯ ಶಿಕ್ಷಕರನ್ನು ನೇಮಿಸಬಾರದು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಕಲಿಕೆಯ ನಿರಂತರತೆಯು ಫಲಿತಾಂಶ ಸುಧಾರಣೆಗೆ ಮುನ್ನುಡಿ ಬರೆಯುತ್ತದೆ ಎಂದರು. ಈ ದಿನ ತರಬೇತಿ ಪಡೆಯುವ ಸಂಪನ್ಮೂಲ ಶಿಕ್ಷಕರು ತಮ್ಮ ಬ್ಲಾಕ್ ಗಳಲ್ಲಿ ಇದೇ ಶನಿವಾರದಿಂದ ಕಾರ್ಯ ಪ್ರವೃತ್ತರಾಗಿ ವಿಷಯವಾರು ಶಿಕ್ಷಕರಿಗೆ ತರಬೇತಿ ನೀಡಬೇಕು. ಅದಕ್ಕೆ ಸಂಬಂಧಿಸಿದಂತೆ ತಯಾರಿ ಮಾಡಿಕೊಳ್ಳಬೇಕು ಎಂದರು. ಎಲ್ಲರೂ ಚೆನ್ನಾಗಿ ಕೆಲಸ ಮಾಡೋಣ. ಫಲಿತಾಂಶ ಸುಧಾರಣೆಯೇ ನಮ್ಮ ನಿಮ್ಮ ಮೊದಲ ಆದ್ಯತೆ ಆಗಬೇಕು ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಶಾಲಾ ಶಿಕ್ಷಣ ಇಲಾಖೆ ಕಲಬು-ರಿಯ ಅಪರ ಆಯುಕ್ತರಾದ ಪಾಂಡ್ವೆ ರಾಹುಲ್ ತುಕಾರಾಮ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳು ಈ ಬಾರಿಯ ಎಸ್. ಎಸ್. ಎಲ್. ಸಿ. ಫಲಿತಾಂಶ ಸುಧಾರಣೆಗಾಗಿ ಇಲಾಖೆಯು ನೀಡಿದ ಅಂಶಗಳನ್ನು ಎಲ್ಲಾ ಹಂತದ ಅಧಿಕಾ-ರಿಗಳು ಅನುಷ್ಠಾನಗೊಳಿಸಬೇಕು ಎಂದು ತಿಳಿಸಿದರು.

ಶಾಲೆಯಿಂದ ಹೊರಗುಳಿಯುವ ಮಕ್ಕಳನ್ನು ಮುಖ್ಯವಾಹಿನಿಗೆ ತರಬೇಕು. ಕಲಿಕೆಯಲ್ಲಿ ಹಿಂದುಳಿದ ಮಕ್ಕಳು ಇಲಾಖೆಯ ಕಾರ್ಯಯೋಜನೆಗೆ ಒಳಪಡಬೇಕು. ಈ ಕಾರ್ಯಾಗಾರದಲ್ಲಿ ನೀಡುವ ಸಂಪನ್ಮೂಲಗಳ ಪ್ರಕಾರ ಪ್ರತಿವಾರ ಮಾಡುವ ಹಂತ-1, 2, 3, 4 ಗಳ ಅನುಸಾರ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ತಯಾರಿ ಮಾಡಬೇಕು. ಈ ಬಾರಿ ನೀಡಿದ ಬ್ಲೂ ಪ್ರಿಂಟ್ ಪ್ರಕಾರ ನವೆಂಬರ್-ಡಿಸೆಂಬರ್-ಜನೆವರಿ ಮತ್ತು ಫೆಬ್ರವರಿ ತಿಂಗಳಲ್ಲಿ ಪರಿಣಾಮಕಾರಿಯಾಗಿ ವಿಷಯ ವಸ್ತು ಪುನರಾವರ್ತನೆಗೊಳ್ಳಬೇಕು ಎಂದರು. ರಾಯಚೂರಿನ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಮಾತನಾಡಿ, ಈ ಬಾರಿ ರಾಯಚೂರು ಜಿಲ್ಲೆಯ ಎಸ್.ಎಸ್.ಎಲ್.ಸಿ ಫಲಿತಾಂಶವು ಕಳೆದ ಬಾರಿಗಿಂತ ಉತ್ತಮಪಡಿಸಬೇಕು. ಜೊತೆಗೆ ಇಲಾಖೆಯು ನೀಡಿದ ಎಲ್ಲಾ ಅಂಶಗಳನ್ನು ಶಾಲಾ ಹಂತದಲ್ಲಿ ಅನುಷ್ಠಾನಗೊಳಿಸಬೇಕು.

ಕ್ರಿಯಾಯೋಜನೆಯಂತೆ ಕಾರ್ಯ ನಿರ್ವಹಿಸಬೇಕು. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಗುರುತಿಸಿ ಅವರಲ್ಲಿ ಆತ್ಮವಿಶ್ವಾಸ ತುಂಬುವ ಕೆಲಸ ಮಾಡಬೇಕು. ಪಾಲಕ ಪೋಷಕರ ಸಭೆ ಮಾಡಿ ಅವರೊಂದಿಗೆ ಚರ್ಚಿಸಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪುನಃ ಶಾಲೆಗೆ ಕರೆತರಬೇಕು ಎಂದು ಸೂಚನೆ ನೀಡಿದರು. ಕಾರ್ಯಾಗಾರದಲ್ಲಿ ನಾಲ್ಕು ಜಿಲ್ಲೆಗಳ ಪ್ರತಿಯೊಂದು ತಾಲೂಕಿನ ಆರು ವಿಷಯಗಳ ಆರು ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಿ ಬರುವ ಎಸ್. ಎಸ್ . ಎಲ್. ಸಿ. ಪರೀಕ್ಷೆ ಫಲಿತಾಂಶ ಸುಧಾರಣೆಗಾಗಿ 12 ವಾರಗಳ ಕಾರ್ಯಯೋಜನೆ ಸಿದ್ದಪಡಿಸಲಾಯಿತು. ವಿಷಯ ಸಂಪನ್ಮೂಲ ಶಿಕ್ಷಕರೊಂದಿಗೆ ಉಪನಿರ್ದೇಶಕರು, ಡಯಟ್ ಪ್ರಾಂಶುಪಾಲರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಯಟ್ ಉಪನ್ಯಾಸಕರು, ವಿಷಯ ಪರಿವೀಕ್ಷಕರು, ಶಿಕ್ಷಣಾಧಿಕಾರಿಗಳು ಎಲ್ಲರನ್ನೊಳಗೊಂಡು ಒಟ್ಟು 190 ಜನ ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಿದ್ದರು.

ಕಾರ್ಯಾಗಾರದಲ್ಲಿ ಹಾಜರಾದ ಎಲ್ಲಾ 190 ಸಂಪನ್ಮೂಲ ಶಿಕ್ಷಕರು /ಅಧಿಕಾರಿಗಳು ತರಬೇತಿಯನ್ನಾಧರಿಸಿ ಬರುವ ವರ್ಷದ ಎಸ್. ಎಸ್ . ಎಲ್. ಸಿ. ಫಲಿತಾಂಶವನ್ನು ಪ್ರತಿ ಶತದಷ್ಟು ಸಾಧಿಸುವ ದೃಢ ನಿಶ್ಚಯದೊಂದಿಗೆ ಇಲಾಖೆಯ ಕಾರ್ಯಯೋಜನೆ ಯಶಸ್ವಿಗೊಳಿಸಲು ತಿಳಿಸಲಾಯಿತು. ಕಾರ್ಯಕ್ರಮದಲ್ಲಿ ಹಿರಿಯ ಅಧಿಕಾರಿಗಳಾದ ಪ್ರಕಾಶ್ ನಿಟ್ಟಾಲಿ, ರಾಯಚೂರಿನ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಶಾಲಾ ಶಿಕ್ಷಣ ಇಲಾಖೆ ಧಾರವಾಡದ ಅಪರ ಆಯುಕ್ತರಾದ ಮಾನ್ಯ ಈಶ್ವರ ಉಳ್ಳಾಗಡ್ಡಿ, ಕೆ.ಎಸ್.ಈ.ಎ.ಬಿ ಮತ್ತು ಡಿ.ಎಸ್.ಈ.ಆರ್.ಟಿ ಬೆಂಗಳೂರು ನಿರ್ದೇಶಕರಾದ ಮಾನ್ಯ ಗೋಪಾಲಕೃಷ್ಣ, ಹೆಚ್. ಎನ್. ಕಲ್ಯಾಣ ಕರ್ನಾಟಕ ಪ್ರದೇಶದ ರಾಯಚೂರು, ಕೊಪ್ಪಳ, ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳ ನೋಡಲ್ ಅಧಿಕಾರಿಗಳು ಹಾಗೂ ತಾಲೂಕವಾರು ಆರು ವಿಷಯಗಳ ಸಂಪನ್ಮೂಲ ಶಿಕ್ಷಕರುಗಳು ಜೊತೆಗೆ ಧಾರವಾಡ ವಿಭಾಗದ ಆಯುಕ್ತರುಗಳು, ಅಧಿಕಾರ ವೃಂದದವರು ಮತ್ತು ಆರು ವಿಷಯಗಳ ಸಂಪನ್ಮೂಲ ಶಿಕ್ಷಕರುಗಳು ಸೇರಿ ಒಟ್ಟು 190 ಜನ ಹಾಜ-ರಿದ್ದರು. ಕೆ.ಡಿ.ಬಡಿಗೇರ ಉಪನಿರ್ದೇಶಕರು (D) ಶಾಲಾ ಶಿಕ್ಷಣ ಇಲಾಖೆ ರಾಯಚೂರು ಸ್ವಾಗತಿಸಿದರು.